ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 85 | ರಾಯಚೂರು Raichur | 17-09-2026 | ಗುರುವಾರ Thursday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

## ಇಂದು ಸಚಿವ ಡಾ.ಅಜಯ್ ಧರ್ಮಸಿಂಗ್ ಅವರ ಜಿಲ್ಲಾ ಪ್ರವಾಸ



ರಾಯಚೂರು ಸೆ. 16 (ಕರ್ನಾಟಕ ವಾರ್ತೆ): ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ಸೆಪ್ಟಂಬರ್ 17ರ ಗುರುವಾರ ದಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅವರು ಸೆಪ್ಟಂಬರ್ 17ರ ಬೆಳಿಗ್ಗೆ 08.30ಕ್ಕೆ ರಾಯಚೂರು ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಲ್ಲಿ ಪಟೇಲ್ ಪುತ್ಥಳಿಗೆ ಮಾಲಾರ್ಪಣೆ ಮಾಡಲಿದ್ದಾರೆ.

ನಂತರ ಬೆಳಿಗ್ಗೆ 9ಗಂಟೆಗೆ ರಾಯಚೂರು ನಗರದ ಮಹಾತ್ಮಾಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಳ್ಳಲಾದ 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ರಾಷ್ಟ ಧ್ವಜಾರೋಹಣ ನೇರವೇರಿಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ಮಲ್ಲಿಕಾರ್ಜುನ ರೆಡ್ಡಿ ಪಾಟೀಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತೀಯ ಚಿತ್ರರಂಗದ ಅತ್ಯುನ್ನತ ಗೌರವ ಅನಂತ್ ನಾಗ್ ಮುಡಿಗೆ

ನವದೆಹಲಿ: ಕನ್ನಡ ಚಿತ್ರರಂಗದ ಹಿರಿಯ ನಟ ಅನಂತ್ ನಾಗ್ ಅವರಿಗೆ ಭಾರತೀಯ ಚಿತ್ರರಂಗದ ಅತ್ಯುನ್ನತ ಗೌರವವೆನಿಸಿರುವ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ2024 ಘೋಷಿಸಲಾಗಿದೆ. ಐದು ದಶಕಗಳಿಗೂ ಹೆಚ್ಚು ಕಾಲ ಭಾರತೀಯ ಚಿತ್ರರಂಗಕ್ಕೆ, ವಿಶೇಷವಾಗಿ ಕನ್ನಡ ಚಿತ್ರರಂಗಕ್ಕೆ ನೀಡಿದ ವಿಶಿಷ್ಟ ಕೊಡುಗೆಯನ್ನು ಪರಿಗಣಿಸಿ ಕೇಂದ್ರ ಸರ್ಕಾರ ಈ ಗೌರವಕ್ಕೆ ಅವರನ್ನು ಆಯ್ಕೆ ಮಾಡಿದೆ.

ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಆಯ್ಕೆ ಸಮಿತಿಯ ಶಿಫಾರಸಿನ ಮೇರೆಗೆ ಅನಂತ್ ನಾಗ್ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ಸೆ.22ರಂದು ಗುಜರಾತ್‌ನ ಏಕತಾ ನಗರ (ಕೆವಾಡಿಯಾ)ದಲ್ಲಿ ನಡೆಯಲಿರುವ 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿಗಳು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಅನಂತ್ ನಾಗ್ ಅವರಿಗೆ ಅಭಿನಂದನೆ ಸಲ್ಲಿಸಿದ್ದು, ದಶಕಗಳಿಂದ ತಮ್ಮ ಸಹಜ ಅಭಿನಯ ಮತ್ತು ಬಹುಮುಖ ಪ್ರತಿಭೆಯ ಮೂಲಕ ಭಾರತೀಯ ಚಿತ್ರರಂಗದಲ್ಲಿ, ಅದರಲ್ಲೂ ಕನ್ನಡ ಚಿತ್ರರಂಗದಲ್ಲಿ ವಿಶಿಷ್ಟಛಾಪು ಮೂಡಿಸಿದ್ದಾರೆ ಎಂದು ಶ್ಲಾಘಿಸಿದ್ದಾರೆ. ಅನಂತ್ ನಾಗ್ ನಿರ್ವಹಿಸಿದ ಪಾತ್ರಗಳಲ್ಲಿನ ಸಹಜತೆ ಹಾಗೂ ವಿಭಿನ್ನ ಅಭಿನಯಶೈಲಿಯನ್ನು ಪ್ರಧಾನಿ ಮೆಚ್ಚಿಕೊಂಡಿದ್ದಾರೆ.

ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೂಡ ಅನಂತ್ ನಾಗ್ ಅವರಿಗೆ ಅಭಿನಂದನೆ ಸಲ್ಲಿಸಿದ್ದು, ಈ ಗೌರವ ಕನ್ನಡಿಗರಿಗೆ ಹೆಮ್ಮೆ ಮತ್ತು ಸಂತಸದ ಕ್ಷಣವಾಗಿದೆ ಎಂದು ತಿಳಿಸಿದ್ದಾರೆ.



ಸೆಪ್ಟೆಂಬರ್ 4, 1948ರಂದು ಜನಿಸಿದ ಅನಂತ್ ನಾಗ್ ಅವರ ಮೂಲ ಹೆಸರು ಅನಂತ್ ನಾಗರಕಟ್ಟೆ. ಸುಮಾರು ಐದು ದಶಕಗಳ ಸುದೀರ್ಘ ಕಲಾ ಬದುಕಿನಲ್ಲಿ 250ಕ್ಕೂ ಹೆಚ್ಚು ಕನ್ನಡ ಸಿನಿಮಾಗಳು ಸೇರಿದಂತೆ ಒಟ್ಟು 300ಕ್ಕೂ ಅಧಿಕ ಚಿತ್ರಗಳಲ್ಲಿ ಅಭಿನಯಿಸಿದ್ದಾರೆ. ಕನ್ನಡ ಮಾತ್ರವಲ್ಲದೆ ಹಿಂದಿ ಹಾಗೂ ಹಲವು ಭಾರತೀಯ ಭಾಷೆಗಳ ಚಿತ್ರಗಳಲ್ಲಿಯೂ ತಮ್ಮ ಅಭಿನಯದ ಛಾಪು ಮೂಡಿಸಿದ್ದಾರೆ. ದ'ೂರ'ದ'ಶ'ೕನ'ದ' ಜನಪ್ರಿಯ ಮಾಲ್ಗುಡಿ ಡೇಸ್ ಧಾರಾವಾಹಿಯಲ್ಲಿನ ಅವರ ಅಭಿನಯವೂ ಪ್ರೇಕ್ಷಕರ ಮೆಚ್ಚುಗೆ ಪಡೆದಿದೆ.

ಚಿತ್ರರಂಗದ ಜೊತೆಗೆ ರಂಗಭೂಮಿ ಮತ್ತು ಕಿರುತೆರೆಯಲ್ಲಿಯೂ ಸಕ್ರಿಯರಾಗಿದ್ದ ಅನಂತ್ ನಾಗ್ ತಮ್ಮ ಅಭಿನಯಕ್ಕಾಗಿ ಐದು ಬಾರಿ ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿಗೆ ಭಾಜನರಾಗಿದ್ದಾರೆ. 2025ರಲ್ಲಿ ಕೇಂದ್ರ ಸರ್ಕಾರ ಅವರಿಗೆ ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಿತ್ತು.

ಭಾರತೀಯ ಚಿತ್ರರಂಗದ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಜೀವಮಾನಪೂರ್ತಿ ನೀಡಿದ ಮಹತ್ವದ ಕೊಡುಗೆಯನ್ನು ಪರಿಗಣಿಸಿ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯನ್ನು ನೀಡಲಾಗುತ್ತದೆ. ಪ್ರಶಸ್ತಿಯು ಸ್ವರ್ಣ ಕಮಲ, ಶಾಲು ಹಾಗೂ ₹15 ಲಕ್ಷ ನಗದು ಬಹುಮಾನವನ್ನು ಒಳಗೊಂಡಿದೆ.

ಕನ್ನಡ ಚಿತ್ರರಂಗದ ಮೇರುನಟ ಡಾ. ರಾಜ್ ಕುಮಾರ್ ಅವರಿಗೆ ಈ ಪ್ರತಿಷ್ಠಿತ ಗೌರವ ಲಭಿಸಿದ ದಶಕಗಳ ಬಳಿಕ ಅನಂತ್ ನಾಗ್ ಅವರಿಗೆ ಪ್ರಶಸ್ತಿ ಘೋಷಣೆಯಾಗಿರುವುದು ಕನ್ನಡ ಚಿತ್ರರಂಗ ಹಾಗೂ ಕನ್ನಡಿಗರ ಪಾಲಿಗೆ ಮತ್ತೊಂದು ಹೆಮ್ಮೆಯ ಕ್ಷಣವಾಗಿದೆ. ಐದು ದಶಕಗಳ ಕಲಾ ಪಯಣ, ಸಹಜ ಅಭಿನಯ ಮತ್ತು ವೈವಿಧ್ಯಮಯ ಪಾತ್ರಗಳ ಮೂಲಕ ಪ್ರೇಕ್ಷಕರ ಮನಸ್ಸಿನಲ್ಲಿ ಅಚ್ಚಳಿಯದ ಸ್ಥಾನ ಪಡೆದಿರುವ ಅನಂತ್ ನಾಗ್ ಅವರಿಗೆ ಸಂದ ಈ ಗೌರವಕ್ಕೆ ಚಿತ್ರರಂಗದ ಗಣ್ಯರು ಹಾಗೂ ಅಭಿಮಾನಿಗಳಿಂದ ಅಭಿನಂದನೆಗಳ ಮಹಾಪೂರ ಹರಿದುಬರುತ್ತಿದೆ.

## ಧಾರ್ಮಿಕ ಆಚರಣೆಗಳಲ್ಲಿ ಕಾನೂನು ಎಲ್ಲರಿಗೂ ಸಮಾನವಾಗಿರಲಿ: ಪ್ರಮೋದ್ ಮುತಾಲಿಕ್



ರಾಯಚೂರು: ರಾಜ್ಯದಲ್ಲಿ ಧಾರ್ಮಿಕ ಸ್ವಾತಂತ್ರ್ಯಕ್ಕೆ ಧಕ್ಕೆಯಾಗುವಂತಹ ವಾತಾವರಣ ನಿರ್ಮಾಣವಾಗುತ್ತಿದ್ದು, ಸಂವಿಧಾನ ನೀಡಿರುವ ಧಾರ್ಮಿಕ ಸ್ವಾತಂತ್ರ್ಯವನ್ನು ಗೌರವಿಸಬೇಕು. ಹಬ್ಬ-ಹರಿದಿನಗಳ ಸಂದರ್ಭದಲ್ಲಿ ಕಾನೂನು ಎಲ್ಲ ಸಮುದಾಯಗಳಿಗೂ ಸಮಾನವಾಗಿ ಅನ್ವಯವಾಗಬೇಕು ಎಂದು ಶ್ರೀರಾಮ ಸೇನೆಯ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗಣೇಶೋತ್ಸವದ ಸಂದರ್ಭದಲ್ಲಿ ಡಿಜೆ ಬಳಕೆಗೆ ನಿರ್ಬಂಧ ವಿಧಿಸುವುದು, ಮಸೀದಿಗಳ ಮುಂದೆ ಮೆರವಣಿಗೆ ಸಾಗುವಾಗ ಡಿಜೆ ಬಳಸಬಾರದು ಎಂಬ ನಿಯಮಗಳನ್ನು ಹೇರುವುದನ್ನು ಪ್ರಶ್ನಿಸಿದರು. "ನಮ್ಮ ಡಿಜೆ ಸೌಂಡ್ ನಿಲ್ಲಿಸುವ ತಾಕತ್ತು ಇದ್ದರೆ, ಮಸೀದಿಗಳಲ್ಲಿ ಧ್ವನಿವರ್ಧಕಗಳಿಂದ ಬರುವ ಶಬ್ದದ ಮೇಲೆಯೂ ಅದೇ ರೀತಿಯ ಕ್ರಮ ಕೈಗೊಳ್ಳಿ'' ಎಂದು ಹೇಳಿದ ಅವರು, ಕಾನೂನು ಜಾರಿಯಲ್ಲಿ ತಾರತಮ್ಯ ಇರಬಾರದು ಎಂದು ಒತ್ತಾಯಿಸಿದರು.

ಮಸೀದಿಗಳಲ್ಲಿ ಧ್ವನಿವರ್ಧಕಗಳ ಬಳಕೆಗೆ ಸಂಬಂಧಿಸಿದ ನಿಯಮಗಳನ್ನೂ ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುತ್ತಿದೆಯೇ ಎಂಬುದನ್ನು ಪೊಲೀಸ್ ಇಲಾಖೆ ಮತ್ತು ಜಿಲ್ಲಾಡಳಿತ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಲಿಂಗಸುಗೂರು ತಾಲೂಕಿನ ಈಚನಾಳ ಗ್ರಾಮದಲ್ಲಿ ನಡೆದಿರುವುದಾಗಿ ಹೇಳಲಾದ ಅಸ್ಪೃಶ್ಯತೆ ಪ್ರಕರಣವನ್ನು ಪ್ರಸ್ತಾಪಿಸಿದ ಮುತಾಲಿಕ್, ಇಂತಹ ಘಟನೆಗಳು ಸಮಾಜಕ್ಕೆ ಶೋಭೆ ತರುವುದಿಲ್ಲ ಎಂದರು. ದಲಿತರನ್ನು ಅವಮಾನಿಸುವುದು ಸಂವಿಧಾನದ ಸಮಾನತೆಯ ಆಶಯಕ್ಕೆ ವಿರುದ್ಧವಾಗಿದ್ದು, ಡಾ. ಬಿ.ಆರ್. ಅಂಬೇಡ್ಕರ್ ಅವರು ಪ್ರತಿಪಾದಿಸಿದ ಸಮಾನತೆಯ ಮೌಲ್ಯಗಳನ್ನು ಸಮಾಜದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕಾಗಿದೆ ಎಂದು ಹೇಳಿದರು. ಪ್ರಕರಣಕ್ಕೆ ಸಂಬಂಧಿಸಿದಂತೆ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ವಂದೇ ಮಾತರಂ ಗೀತೆಯ 150ನೇ ವರ್ಷದ ಹಿನ್ನೆಲೆಯಲ್ಲಿ ಸಂಪೂರ್ಣ ಗೀತೆಯನ್ನು ಗೌರವಪೂರ್ವಕವಾಗಿ ಹಾಡಬೇಕು ಎಂದು ಪ್ರತಿಪಾದಿಸಿದ ಅವರು, ಈ ವಿಷಯದಲ್ಲಿ 2ನೇ ಪುಟಕ್ಕೆ

## ರಾಜ್ಯಕ್ಕೆ ಕೇಂದ್ರದಿಂದ ಬರಬೇಕಾದ ಅನುದಾನ ಬಿಡುಗಡೆಯಾಗುತ್ತಿಲ್ಲ: ಎನ್.ಎಸ್. ಬೋಸರಾಜು



ಮಾನ್ವಿ: ರಾಜ್ಯಕ್ಕೆ ಕೇಂದ್ರ ಸರ್ಕಾರದಿಂದ ಬರಬೇಕಾದ ವಿವಿಧ ಅನುದಾನ ಹಾಗೂ ಆಹಾರ ಧಾನ್ಯ ಖರೀದಿಯ ಬಾಕಿ ಹಣ ಸಮರ್ಪಕವಾಗಿ ಬಿಡುಗಡೆಯಾಗುತ್ತಿಲ್ಲ ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಆರೋಪಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಬಲ ಬೆಲೆ ಯೋಜನೆಯಡಿ ರಾಗಿ ಮತ್ತು ಜೋಳವನ್ನು ಕೇಂದ್ರ ಸರ್ಕಾರದ ಆಹಾರ ಇಲಾಖೆ ರೈತರಿಂದ ಖರೀದಿಸುತ್ತಿದ್ದು, ರಾಜ್ಯ ಸರ್ಕಾರ ಮಧ್ಯವರ್ತಿಯಾಗಿ ಕಾರ್ಯನಿರ್ವಹಿಸುತ್ತದೆ. ರಾಯಚೂರು ಜಿಲ್ಲೆಯಲ್ಲಿ ಮುಂಗಾರು ಅವಧಿಯಲ್ಲಿ 15,818 ರೈತರಿಂದ 8,31,627 ಕ್ವಿಂಟಾಲ್ ಜೋಳ ಹಾಗೂ ಹಿಂಗಾರು ಅವಧಿಯಲ್ಲಿ 7,291 ರೈತರಿಂದ 4,23,786 ಕ್ವಿಂಟಾಲ್ ಜೋಳ ಖರೀದಿಸಲಾಗಿದೆ ಎಂದು ತಿಳಿಸಿದರು.

ಕೇಂದ್ರದ ಆಹಾರ ಇಲಾಖೆಯಿಂದ ರಾಗಿ ಮತ್ತು ಜೋಳ ಖರೀದಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರಕ್ಕೆ ಸುಮಾರು ₹1,000 ಕೋಟಿ ಬಾಕಿ ಬರಬೇಕಿದ್ದು, ಇದುವರೆಗೂ ಹಣ ಬಿಡುಗಡೆಯಾಗಿಲ್ಲ. ಮುಖ್ಯಮಂತ್ರಿ ಎರಡು ಬಾರಿ ದೆಹಲಿಗೆ ತೆರಳಿ ಬಾಕಿ ಹಣ ಬಿಡುಗಡೆ ಮಾಡುವಂತೆ ಮನವಿ ಮಾಡಿದರೂ ಕೇಂದ್ರದಿಂದ ಸ್ಪಂದನೆ ದೊರೆತಿಲ್ಲ ಎಂದು ಹೇಳಿದರು.

ರೈತರ ಸಂಕಷ್ಟವನ್ನು ಗಮನದಲ್ಲಿಟ್ಟುಕೊಂಡು ಮುಖ್ಯಮಂತ್ರಿ ಅವರು ರಾಜ್ಯದ ತುರ್ತು ಪರಿಸ್ಥಿತಿಗಾಗಿ ಮೀಸಲಿಟ್ಟಿರುವ ಆವರ್ತ ನಿಧಿಯನ್ನು ಬಳಸಿಕೊಂಡು ಮುಂಗಾರು ಅವಧಿಯಲ್ಲಿ ಪ್ರತಿ ಕ್ವಿಂಟಾಲ್‌ಗೆ ₹3,690ರಂತೆ ಮೇ 23ರವರೆಗೆ ಜಿಲ್ಲೆಯ ರೈತರಿಗೆ ₹309.65 ಕೋಟಿ ಪಾವತಿಸಲಾಗಿದೆ. ಹಿಂಗಾರು ಜೋಳದ ₹156 ಕೋಟಿ ಮೊತ್ತದಲ್ಲಿ ₹47.50 ಕೋಟಿ ಪಾವತಿಸಲಾಗಿದ್ದು, ಇನ್ನೂ ₹109 ಕೋಟಿ ರೈತರಿಗೆ ನೀಡಬೇಕಾಗಿದೆ ಎಂದು ವಿವರಿಸಿದರು.

ರೈತರಿಂದ ಖರೀದಿಸಿದ ರಾಗಿ ಮತ್ತು ಜೋಳವನ್ನು ಪಡಿತರದಾರರಿಗೆ ವಿತರಿಸಿದ ನಂತರವೂ ರಾಜ್ಯಕ್ಕೆ ಬರಬೇಕಾದ ಹಣ ಬಿಡುಗಡೆಯಾಗಿಲ್ಲ. ಈ ಕುರಿತು ರಾಜ್ಯದ ಆಹಾರ ಸಚಿವರು ಹಾಗೂ ಆಹಾರ ಇಲಾಖೆಯ ನಿರ್ದೇಶಕರು ದೆಹಲಿಗೆ ತೆರಳಿ ಕೇಂದ್ರದ ಅಧಿಕಾರಿಗಳೊಂದಿಗೆ ಚರ್ಚಿಸಿ ಹಣ ಬಿಡುಗಡೆಗೆ ಕ್ರಮ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದರು.

ರಾಜ್ಯದಿಂದ ಆಯ್ಕೆಯಾಗಿರುವ ಎನ್‌ಡಿಎ ಮೈತ್ರಿಕೂಟದ ಸಂಸದರು ಹಾಗೂ ಕೇಂದ್ರ ಸಚಿವರು ರಾಜ್ಯದ ಪರವಾಗಿ ಧ್ವನಿ ಎತ್ತಬೇಕು. ರೈತರ ವಿಷಯದಲ್ಲಿ ರಾಜಕೀಯ ಮಾಡದೆ, ಜಿಲ್ಲೆಗೆ ಹಾಗೂ ರಾಜ್ಯಕ್ಕೆ ಬರಬೇಕಾದ ಅನುದಾನವನ್ನು ಕೇಂದ್ರದಿಂದ ಬಿಡುಗಡೆ ಮಾಡಿಸಲು ಪ್ರಯತ್ನಿಸಬೇಕು 2ನೇ ಪುಟಕ್ಕೆ



# ರೈತರು, ವಿಮಾ ಕಂಪನಿ ಪ್ರತಿನಿಧಿಗಳು ಕಡ್ಡಾಯವಾಗಿ ಬೆಳೆ ಕಟಾವು ಸಿಸಿಇ ಸಂರಕ್ಷಣಾ ಪೋರ್ಟ್ಲ್‌ನಲ್ಲಿ ಅಪ್ಲೋಡ್ ಮಾಡಲು ಜಿಲ್ಲಾಧಿಕಾರಿ ಪೂವಿತಾ ಎಸ್. ಮನವಿ



ರಾಯಚೂರು ಸೆ. 16 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ 2026-27ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಮುಂಗಾರು ಹಂಗಾಮಿನಲ್ಲಿ ವಿವಿಧ ಬೆಳೆಗಳಿಗೆ ಹಂಚಿಕೆಯಾದ ಬೆಳೆ ಕಟಾವು ಪ್ರಯೋಗಗಳು ಈಗಾಗಲೇ ಜಿಲ್ಲೆಯಲ್ಲಿ ಪ್ರಾರಂಭವಾಗಿದ್ದು, ಸದರಿ ಬೆಳೆ ಕಟಾವುಗಳ ಪ್ರಯೋಗಗಳನ್ನು ವಿವಿಧ ಇಲಾಖೆಯ ಮೂಲಕಾರ್ಯಕರ್ತರಾದ ಕಂದಾಯ ಇಲಾಖೆ ಗ್ರಾಮ ಆಡಳಿತ ಅಧಿಕಾರಿಗಳು, ಕೃಷಿ ಇಲಾಖೆಯ ಸಹಾಯಕ ಕೃಷಿ ಅಧಿಕಾರಿ/ಕೃಷಿ ಅಧಿಕಾರಿ,ತೋಟಗಾರಿಕೆ ಇಲಾಖೆಯ ಸಹಾಯಕ ತೋಟಗಾರಿಕ ಅಧಿಕಾರಿ ಮತ್ತು ಪಂಚಾಯತ್ ಇಲಾಖೆಯ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಆಯಾ ಇಲಾಖೆಯ ಮೇಲ್ವಿಚಾರಕರು ಹಾಗೂ ಹೊಲದ ರೈತರು ಮತ್ತು ವಿಮಾ ಕಂಪನಿಯಾ ಪ್ರತಿನಿಧಿಗಳು ಕಡ್ಡಾಯವಾಗಿ ಹಾಜರಾಗಿ ಜಂಟಿ ಸಹಿ ಹೊಂದಿರುವ ಹಾಜರಾತಿಯನ್ನು ಸಿಸಿಇ ಸಂರಕ್ಷಣಾ ಪೋರ್ಟ್ಸ್ ಅಪ್ಲೋಡ್ ಮಾಡಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದ್ದಾರೆ.

ನಮೂನೆ-2ರ ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳುವಾಗ ಬೆಳೆ ಕಟಾವು ಪ್ರಯೋಗಗಳ ನಿಯಾಮವಳಿ ಪ್ರಕಾರ ಆಯ್ಕೆಯಾಗಿರುವ ಸರ್ವೇ ನಂಬರ್ ನಲ್ಲಿ ಅನಿಮಿಯತ ಸಂಖ್ಯೆಯನ್ನು ಆಯ್ಕೆ ಮಾಡಿ ಬಂದತಹ ಬಿಂದುಗಳನ್ನು ಬಳಸಿ ನೈಋತ್ಯ ಮೂಲೆಯಿಂದ ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳುವ ಸರ್ವೇ ನಂ ಆಯ್ಕೆ ಮಾಡುವಾಗ ಸಾಲು ಬೆಳೆಗಳಿಗೆ 10★5 ಹಾಗೂ ಉಳಿದ ಬೆಳೆಗಳಿಗೆ 5★5 ಮೀಟರ್ ಆಳತೆ ಪ್ಲಾಟಿನಲ್ಲಿ ಮೂಲಕಾರ್ಯಕರ್ತರ ಹೊಲದ ರೈತರ ಸಮಕ್ಷಮದಲ್ಲಿ ಲೋಪದೋಷವಾಗದಂತೆ ವೈಜ್ಞಾನಿಕವಾಗಿ ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಂಡು ಬಂದತಹ ಇಳುವರಿಯನ್ನು ಸರಿಯಾಗಿ ನಮೂದಿಸಿದ ಸಿಸಿಇ ಸಂರಕ್ಷಣಾ ಪೋರ್ಟ್ಲ್‌ನಲ್ಲಿ ಅಪ್ಲೋಡ್ ಮಾಡವುದರಿಂದ ಅರ್ಹ ರೈತವರ್ಗದವರಿಗೆ ಬೆಳ ವಿಮಾ ಮೊತ್ತವನ್ನು ಪಾವತಿಸಲು ಸಹಾಯವಾಗುತ್ತದೆ.

ಸೂರ್ಯಕಾಂತಿ(ಮ.ಆ) ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳುವಾಗ ಕೆಲವು ಮೂಲಕಾರ್ಯಕರ್ತರ ಹಾಜರಾಗದೇ ವಿಮಾ ಕಂಪನಿಯ ಪ್ರತಿನಿಧಿಗಳು ಮಾತ್ರ ಹಾಜರಾಗಿ ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಂಡು ಅಧಿಕ ಇಳುವರಿಯನ್ನು ನಮೂದಿಸಿರುವುದು ಪರೀಶೀಲನೆಯಿಂದ ಕಂಡಬದಿರುತ್ತದೆ.

ಈ ರೀತಿ ಆದ ಸಂದರ್ಭದಲ್ಲಿ ಸಂಬದಿಸಿದ ವಿಮಾ ಘಟಕದ ವ್ಯಾಪ್ತಿಗೆ ಬರುವ ರೈತರಿಗೆ ಬರಬೇಕಾದ ವಿಮಾ ಕೈತಪ್ಪಿಹೋಗುವ ಸಂಭವವಿರುತ್ತದೆ. ಇಂತಹ ಪ್ರಕರಣಗಳು ಕಂಡುಬದಲ್ಲಿ ಸಂಬದಿಸಿದ ಇಲಾಖೆಯ ಮೂಲಕಾರ್ಯಕರ್ತರ ಮುಖಾಂತರ ರೈತರು ದೂರನ್ನು ನೀಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ. 19, 20 ರಂದು ವಿಶೇಷ ಮಿಂಚಿನ ನೋಂದಣಿ ಅಭಿಯಾನ: ಜಿ.ಪಂ ಸಿಇಒ ಈಶ್ವರ ಕುಮಾರ್ ಕಾಂದೂ



ರಾಯಚೂರು ಸೆ. 16 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್)-2026 ಹೊಸ ಮತದಾರರ ನೋಂದಣಿ ವಿಶೇಷ ಅಭಿಯಾನ ಸೆಪ್ಟಂಬರ್ 19 ಹಾಗೂ 20ರಂದು ವಿಶೇಷ ಮಿಂಚಿನ ನೋಂದಣಿ ಅಭಿಯಾನವನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ ಕಾಂದೂ ಅವರು ತಿಳಿಸಿದ್ದಾರೆ.

ಭಾರತೀಯ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವುದು ತಮ್ಮ ಪ್ರಜಾಸತ್ತಾತ್ಮಕ ಹಕ್ಕಿನ ಮಹತ್ವದ ಭಾಗವಾಗಿದೆ. ಅರ್ಹ ಮತದಾರರು ಯಾವುದೇ ಕಾರಣಕ್ಕೂ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಈ ವಿಶೇಷ ಅಭಿಯಾನದ ದ್ಯೇಯೋದ್ದೇಶವಾಗಿದೆ ಆದ್ದರಿಂದ ಸದರಿ ವಿಶೇಷ ಅಭಿಯಾನದ ಸದುಪಯೋಗ ಪಡೆದುಕೊಳ್ಳುವಂತೆ ಕೋರಲಾಗಿದೆ.

ವಿಶೇಷವಾಗಿ ದಿನಾಂಕ: 01 ಆಕ್ಟೋಬರ್ 2026 ರಂದು 18 ವರ್ಷ ವಯಸ್ಸನ್ನು ಪೂರೈಸಿದ ಯುವಕ/ಯುವತಿಯರು ಹೊಸ ಗುರುತಿನ ಚೀಟಿಯನ್ನು ಪಡೆಯಲು ಬಯಸುವವರು ಸೆಪ್ಟಂಬರ್ 23ರೊಳಗೆ ನಮೂನೆ-6 ನ್ನು ಭರ್ತಿ ಮಾಡಿ ಸೂಕ್ತ ದಾಖಲಾತಿಗಳೊಂದಿಗೆ ಬಿಎಲ್‌ಒ ಅವರಿಗೆ ಸಲ್ಲಿಸುವುದು. ನಿಮ್ಮ ಹೆಸರು ಈಗಾಗಲೇ ಮತದಾರರ ಪಟ್ಟಿಯಲ್ಲಿ ಇದೆಯೇ..? ಎಂಬುದನ್ನು ಆನ್‌ಲೈನ್ ಮೂಲಕ ಪರಿಶೀಲಿಸಿಕೊಳ್ಳಿ.

ಹೆಸರು ಇಲ್ಲದ ಅರ್ಹ ನಾಗರಿಕರು ಹೊಸ ಮತದಾರರ ನೋಂದಣಿಗಾಗಿ ಅಗತ್ಯ ನಮೂನೆ-6 ಅರ್ಜಿಯನ್ನು ಸಲ್ಲಿಸಬೇಕು. ಹೆಸರು, ವಿಳಾಸ, ವಯಸ್ಸು ಮುಂತಾದ ವಿವರಗಳಲ್ಲಿ ಯಾವುದೇ ತಪ್ಪುಗಳಿದ್ದಲ್ಲಿ, ನಿಯಮಾನುಸಾರ ತಿದ್ದುಪಡಿಗಾಗಿ ಅರ್ಜಿ ಸಲ್ಲಿಸಬೇಕು. ಕುಟುಂಬದ 18 ವರ್ಷ ಮೇಲ್ಪಟ್ಟ ಅಥವಾ ದಿನಾಂಕ:01.10.2026 ರಂದು 18 ವರ್ಷ ಪೂರೈಸುವ ಅರ್ಹ ಯುವಕ-ಯುವತಿಯರು ಮತದಾರರಾಗಿ ನೋಂದಾಯಿತರಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು.

ತಮ್ಮ ವ್ಯಾಪ್ತಿಯ ಬಿಎಲ್‌ಒ ಅವರನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಮತ್ತು ಮಾರ್ಗದರ್ಶನ ಪಡೆದುಕೊಳ್ಳಬಹುದು. ಈ ವಿಶೇಷ ಅಭಿಯಾನದ ಸಂದರ್ಭದಲ್ಲಿ ಜಿಲ್ಲೆಯ ಎಲ್ಲಾ ಅರ್ಹ ನಾಗರಿಕರು, ವಿಶೇಷವಾಗಿ ಮೊದಲ ಬಾರಿಗೆ ಮತದಾರರಾಗಲಿರುವ ಯುವಜನರು, ಸಕ್ರಿಯವಾಗಿ ಭಾಗವಹಿಸಿ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳುವತೆ ರಾಯಚೂರು ಜಿಲ್ಲೆಯ ಸಾರ್ವಜನಿಕರಿಗೆ ತಿಳಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮೃತ ವಾಣಿ

ಈ ಜಗತ್ತಿನ ಮೇಲೆ ನಮ್ಮ ಹಕ್ಕಿಲ್ಲ, ನಮ್ಮ ಪಾಲಿನ ಸಮಯ ಮಾತ್ರ ಇದೆ.

## 1588 ನೇಯ ದಿನಕ್ಕೆ ಏಮ್ಸ್ ಹೋರಾಟ

# ಜವಳ ಸಂಭ್ರಮದಲ್ಲಿ ಮೊಳಗಿದ ಸಂವಿಧಾನದ ಸಂದೇಶ

ಲಿಂಗಸುಗೂರು: ತಾಲೂಕಿನ ನರಕಲದಿನ್ನಿ ಗ್ರಾಮದಲ್ಲಿ ನಡೆದ ಅವಳಿ ಮಕ್ಕಳ ಜವಳ ಕಾರ್ಯಕ್ರಮವು ಕೇವಲ ಕೌಟುಂಬಿಕ ಸಂಭ್ರಮಕ್ಕೆ ಸೀಮಿತವಾಗದೆ, ಸಂವಿಧಾನದ ಮೌಲ್ಯಗಳ ಕುರಿತು ಸಾಮಾಜಿಕ ಜಾಗೃತಿ ಮೂಡಿಸುವ ಅರ್ಥಪೂರ್ಣ ವೇದಿಕೆಯಾಗಿತ್ತು.

ತುಂಬಲಗಡ್ಡಿ ಕುಟುಂಬದ ಶಿಕ್ಷಣ ತಜ್ಞ ಹಾಗೂ ಚಿಂತಕ ನಾಗರಾಜ ಹೆಚ್.ಎನ್. ಅವರ ಅವಳಿ ಮಕ್ಕಳಾದ ಚಿರಂಜೀವಿ ಸೂರ್ಯ ಪಿ.ಎಂ. ಹಾಗೂ ಚಿರಂಜೀವಿ ಚಂದ್ರ ಸಿ.ಎಂ. ಅವರ ಶುಭ ಜವಳ ಕಾರ್ಯಕ್ರಮವು ಕುಟುಂಬದ ಮನೆದೇವರ ಸನ್ನಿಧಿಯಲ್ಲಿ ಸಾಂಪ್ರದಾಯಿಕವಾಗಿ ನೆರವೇರಿತು.

ಬಂಧು-ಬಳಗದ ಸಂತಸ, ಸಂಪ್ರದಾಯಬದ್ಧ ಆಚರಣೆಗಳ ನಡುವೆ ನಮ್ಮ ಸಂವಿಧಾನನಮ್ಮ ಹೆಮ್ಮೆ ಎಂಬ ಸಂದೇಶವನ್ನು ಸಾರುವ ಮೂಲಕ ಕಾರ್ಯಕ್ರಮಕ್ಕೆ ಸಾಮಾಜಿಕ ಜಾಗೃತಿಯ ಸ್ಪರ್ಶ ನೀಡಲಾಯಿತು. ಮಕ್ಕಳಿಗೆ ಬಾಲ್ಯದಿಂದಲೇ ಸಂವಿಧಾನದ ಆಶಯಗಳನ್ನು ಪರಿಚಯಿಸುವ ಉದ್ದೇಶದಿಂದ ಸಮಾನತೆ, ಸ್ವಾತಂತ್ರ್ಯ, ನ್ಯಾಯ, ಸಹೋದರತೆ ಹಾಗೂ ಕರ್ತವ್ಯ ಪ್ರಜ್ಞೆಯ ಮಹತ್ವವನ್ನು ತಿಳಿಸಲಾಯಿತು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಗಳನ್ನು ಸ್ಮರಿಸಿ, ಶಿಕ್ಷಣದ ಮೂಲಕ ಸಂವಿಧಾನದ ಅರಿವು ಮೂಡಿಸುವ ಅಗತ್ಯವನ್ನು ಪ್ರತಿಪಾದಿಸಲಾಯಿತು. ಸಂಪ್ರದಾಯ ನಮ್ಮ ಬೇರು, ಸಂವಿಧಾನ ನಮ್ಮ ಶಕ್ತಿ; ಶಿಕ್ಷಣ ನಮ್ಮ ಭವಿಷ್ಯ, ಸಮಾನತೆ ನಮ್ಮ ಸಮಾಜದ ಸೌಂದರ್ಯ




ಎಂಬ ಸಂದೇಶ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿತ್ತು.

ಕುಟುಂಬದ ಹಿರಿಯರು, ಬಂಧು-ಬಳಗ ಹಾಗೂ ಆತ್ಮೀಯರು ಮಕ್ಕಳಿಗೆ ಆಶೀರ್ವಾದ ನೀಡಿ, ಉತ್ತಮ ಶಿಕ್ಷಣ ಪಡೆದು ಸಂವಿಧಾನದ ಮೌಲ್ಯಗಳನ್ನು ಅಳವಡಿಸಿಕೊಂಡು ಜವಾಬ್ದಾರಿಯುತ ನಾಗರಿಕರಾಗಿ ಬೆಳೆಯಲಿ ಎಂದು ಹಾರೈಸಿದರು.

ಮಕ್ಕಳಿಗೆ ಆಸ್ತಿ ನೀಡುವುದಕ್ಕಿಂತ ಉತ್ತಮ ಶಿಕ್ಷಣ, ಸಂವಿಧಾನದ ಮೌಲ್ಯಗಳು ಹಾಗೂ ಜವಾಬ್ದಾರಿಯುತ ನಾಗರಿಕತೆಯ ಪರಂಪರೆ ನೀಡುವುದು ದೊಡ್ಡ ಕೊಡುಗೆ ಎಂಬ ಸಂದೇಶದೊಂದಿಗೆ ಕಾರ್ಯಕ್ರಮ ಅರ್ಥಪೂರ್ಣವಾಗಿ ಮುಕ್ತಾಯಗೊಂಡಿತು.

# ಚಿಕ್ಕ ಹೊನ್ನಕುಣಿ ನೀರಾವರಿ ಕಚೇರಿ ವಿಲೀನಕ್ಕೆ ರೈತ ಸಂಘ ವಿರೋಧ



ದೇವದುರ್ಗ: ತಾಲೂಕಿನ ಚಿಕ್ಕ ಹೊನ್ನಕುಣಿಯಲ್ಲಿರುವ ಕೃಷ್ಣಾ ಹಾಗೂ ಭದ್ರಾ ಜಲ ನಿಗಮ ನಿಯಮಿತದ ಎನ್.ಆರ್.ಪಿ.ಸಿ. ವಿಭಾಗ ಸಂಖ್ಯೆ6ರ ಕಾರ್ಯಪಾಲಕ ಇಂಜಿನಿಯರ್ ಕಚೇರಿಯನ್ನು ರಾಯಚೂರಿನ ಕಚೇರಿಯೊಂದಿಗೆ ವಿಲೀನಗೊಳಿಸುವ ಪ್ರಸ್ತಾವಕ್ಕೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ದೇವದುರ್ಗ ಘಟಕ ತೀವ್ರ ವಿರೋಧ ವ್ಯಕ್ತಪಡಿಸಿದೆ.

ಸ್ಥಳೀಯವಾಗಿ ಕಾರ್ಯನಿರ್ವಹಿಸುತ್ತಿರುವ ಈ ನೀರಾವರಿ ಕಚೇರಿಯನ್ನು ವಿಲೀನಗೊಳಿಸಿದರೆ ದೇವದುರ್ಗ ತಾಲೂಕಿನ ರೈತರು ನೀರಾವರಿ ಸಂಬಂಧಿತ ಅಹವಾಲುಗಳು, ಕಾಮಗಾರಿಗಳು ಹಾಗೂ ಇಲಾಖಾ ಸೇವೆಗಳಿಗಾಗಿ ರಾಯಚೂರಿಗೆ ತೆರಳಬೇಕಾಗುತ್ತದೆ. ಇದರಿಂದ ರೈತರಿಗೆ ಹೆಚ್ಚುವರಿ ಪ್ರಯಾಣ, ಸಮಯ ಹಾಗೂ ಆರ್ಥಿಕ ಹೊರೆಯಾಗಲಿದೆ ಎಂದು ಸಂಘದ ಮುಖಂಡರು ತಿಳಿಸಿದ್ದಾರೆ.

ರೈತರ ಹಿತಾಸಕ್ತಿ ಹಾಗೂ ಸ್ಥಳೀಯ ಆಡಳಿತದ ಅನುಕೂಲತೆಯನ್ನು ಪರಿಗಣಿಸದೆ ಕಚೇರಿ ವಿಲೀನಗೊಳಿಸುವ ಕ್ರಮ ಕೈಗೊಳ್ಳಬಾರದು. ಸರ್ಕಾರ ಈ ನಿರ್ಧಾರವನ್ನು ತಕ್ಷಣ ಮರುಪರಿಶೀಲಿಸಿ, ಚಿಕ್ಕ ಹೊನ್ನಕುಣಿಯಲ್ಲಿರುವ ಕಚೇರಿಯ ಕಾರ್ಯನಿರ್ವಹಣೆಯನ್ನು ಯಥಾಸ್ಥಿತಿಯಲ್ಲಿ ಮುಂದುವರಿಸಬೇಕು ಎಂದು ಒತ್ತಾಯಿಸಿದ್ದಾರೆ.

ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು ಹಾಗೂ ದೇವದುರ್ಗ ಕ್ಷೇತ್ರದ ಶಾಸಕರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ರೈತರ ಪರವಾದ ಕ್ರಮ ಕೈಗೊಳ್ಳಬೇಕು. ಚುನಾಯಿತ ಜನಪ್ರತಿನಿಧಿಗಳು ಕೂಡಲೇ ಸ್ಪಂದಿಸಿ ಸರ್ಕಾರದ ಗಮನ ಸೆಳೆಯಬೇಕು ಎಂದು ಆಗ್ರಹಿಸಿದ್ದಾರೆ.

ಕಚೇರಿ ವಿಲೀನಕ್ಕೆ ಸಂಬಂಧಿಸಿದ ಆದೇಶವನ್ನು ಒಂದು ವಾರದೊಳಗೆ ಮರುಪರಿಶೀಲಿಸಿ ಹಿಂಪಡೆಯದಿದ್ದರೆ ಪ್ರತಿಭಟನೆ, ಧರಣಿ ಹಾಗೂ ಸಂಬಂಧಪಟ್ಟ ಜನಪ್ರತಿನಿಧಿಗಳ ಕಚೇರಿಗಳ ಎದುರು ಮುತ್ತಿಗೆ ಸೇರಿದಂತೆ ಕಾನೂನುಬದ್ಧ ಹೋರಾಟಗಳನ್ನು ಹಂತ ಹಂತವಾಗಿ ತೀವ್ರಗೊಳಿಸಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ದೇವದುರ್ಗ ಘಟಕ ಎಚ್ಚರಿಕೆ ನೀಡಿದೆ.

ರೈತರ ಅನುಕೂಲ ಮತ್ತು ಸ್ಥಳೀಯ ಜನರ ಹಿತವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ಸಂಘರ್ಷಕ್ಕೆ ಅವಕಾಶ ನೀಡದೆ ವಿಲೀನ ನಿರ್ಧಾರವನ್ನು ಕೂಡಲೇ ಹಿಂಪಡೆಯಬೇಕು ಎಂದು ಸಂಘದ ಮುಖಂಡರು ಒತ್ತಾಯಿಸಿದ್ದಾರೆ.

# ಮತದಾರರ ಪಟ್ಟಿಯಲ್ಲಿ ತಪ್ಪದೆ ಹೆಸರು ನೋಂದಾಯಿಸಿ: ಗೀತಾ ಹಿರೇಮಠ



ಸಿಂಧನೂರು: ಮತದಾರರ ಪಟ್ಟಿಯಲ್ಲಿ ಹೆಸರು ಬಿಟ್ಟುಹೋಗಿರುವವರು ಅಗತ್ಯ ದಾಖಲೆಗಳೊಂದಿಗೆ ಸಮೀಪದ ಬೂತ್ ಮಟ್ಟದ ಅಧಿಕಾರಿಯನ್ನು ಸಂಪರ್ಕಿಸಿ ತಮ್ಮ ಹೆಸರನ್ನು ತಪ್ಪದೆ ನೋಂದಾಯಿಸಿಕೊಳ್ಳಬೇಕು ಎಂದು ಸಿಂಧನೂರು ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಹಿರೇಮಠ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಸಿಂಧನೂರು, ಸಾಲಗುಂದ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸರ್ಕಾರಿ ಉರ್ದು ಪ್ರೌಢಶಾಲೆ ಸಾಲಗುಂದ ಇವರ ಸಹಯೋಗದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮಾತನಾಡಿದ ಗೀತಾ ಹಿರೇಮಠ, ಸಾರ್ವಜನಿಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇಲ್ಲದಿರುವುದು ಗಮನಕ್ಕೆ ಬಂದಲ್ಲಿ ಆತಂಕಕ್ಕೆ ಒಳಗಾಗದೆ ಅಗತ್ಯ ದಾಖಲೆಗಳೊಂದಿಗೆ ಸಮೀಪದ ಬಿಎಲ್‌ಓ ಅವರನ್ನು ಸಂಪರ್ಕಿಸಿ ಹೆಸರು ಸೇರ್ಪಡೆಗೊಳಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

2002ರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಹೆಸರು ಬಿಟ್ಟುಹೋಗಿರುವವರು ಕೂಡ ಅಗತ್ಯ ದಾಖಲೆಗಳನ್ನು ಸಲ್ಲಿಸಿ ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸಬೇಕು. 18 ವರ್ಷ ಪೂರ್ಣಗೊಂಡ ಯುವಕ-ಯುವತಿಯರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಾಯಿಸಿಕೊಳ್ಳುವ ಮೂಲಕ ಮತದಾನದ ಹಕ್ಕು ಪಡೆಯಬೇಕು ಎಂದು ತಿಳಿಸಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (SIR) ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ವಿದ್ಯಾರ್ಥಿಗಳೊಂದಿಗೆ ಸಾಲಗುಂದ ಗ್ರಾಮದ ಸಂತೆ ಮಾರುಕಟ್ಟೆಯಿಂದ ಬಸ್ ನಿಲ್ದಾಣದವರೆಗೆ ಜಾಗೃತಿ ಜಾಥಾ ನಡೆಸಲಾಯಿತು.

ಈ ಸಂದರ್ಭದಲ್ಲಿ ಕೆ.ಎಸ್. ಬೈರಮಟ್ಟಿ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ, ಸೈಫ್ ಖಾನ್ ಆರೋಗ್ಯ ನಿರೀಕ್ಷಣಾಧಿಕಾರಿ, ಶಾಲಾ ಮುಖ್ಯೋಪಾಧ್ಯಾಯ ಅಮತೆಪ್ಪ ಮೇಟಿ, ಸಹ ಶಿಕ್ಷಕರಾದ ಸೈಯದ್ ಮೋಸಿನ್, ಆಯಿಷಾ ಸುಲ್ತಾನ್, ಸೈಯದ್ ಗಜಲಾ ರೂಹಿಹಾ ಸೇರಿದಂತೆ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಧಾರ್ಮಿಕ ಆಚರಣೆಗಳಲ್ಲಿ ಕಾನೂನು ಎಲ್ಲರಿಗೂ ಸಮಾನವಾಗಿರಲಿ: ಪ್ರಮೋದ್ ಮುತಾಲಿಕ್

ಕಾಂಗ್ರೆಸ್ ವಿರುದ್ಧ ರಾಜಕೀಯ ಆರೋಪಗಳನ್ನು ಮಾಡಿದರು. ಶ್ರೀರಾಮ ಸೇನೆಯ ಕಾರ್ಯಕ್ರಮಗಳಲ್ಲಿ ಸಂಪೂರ್ಣ ವಂದೇ ಮಾತರಂ ಗೀತೆಯನ್ನು ಹಾಡಲಾಗುವುದು ಎಂದ ಅವರು, ಜನಗಣಮನ ರಾಷ್ಟ್ರಗೀತೆಯ ಬಗ್ಗೆಯೂ ತಮಗೆ ಪೂರ್ಣ ಗೌರವವಿದ್ದು, ಸ್ವಾತಂತ್ರ್ಯೋತ್ಸವ ಮತ್ತು ಗಣರಾಜ್ಯೋತ್ಸವದಂತಹ ಸಂದರ್ಭಗಳಲ್ಲಿ ಅದನ್ನು ಹಾಡಲಾಗುತ್ತದೆ ಎಂದು ತಿಳಿಸಿದರು.

ಜಮ್ಮು-ಕಾಶ್ಮೀರದಲ್ಲಿ ಹಿಂದೂಗಳ ಸುರಕ್ಷತೆಯ ಕುರಿತು ಮಾತನಾಡಿದ ಅವರು, ಹಿಂದೂಗಳು ಹಾಗೂ ಮಹಿಳೆಯರ ಮೇಲೆ ದಾಳಿ ಅಥವಾ ಬೆದರಿಕೆ ನಡೆದರೆ ಅದರ ವಿರುದ್ಧ ರಾಷ್ಟ್ರವ್ಯಾಪಿ ಪ್ರತಿಭಟನೆ ನಡೆಸಲಾಗುವುದು ಎಂದರು. ಭಯೋತ್ಪಾದಕ ಸಂಘಟನೆಗಳ ವಿರುದ್ಧ ಕೇಂದ್ರ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ನಾಯಕ ಮಲ್ಲಿಕಾರ್ಜುನ ಖರ್ಗೆ ಭಾಗವಹಿಸಿದ್ದ ಕಾರ್ಯಕ್ರಮ ನಡೆದ ಸ್ಥಳವನ್ನು ನಂತರ ಶುದ್ಧೀಕರಿಸಿದ ಘಟನೆ ಕುರಿತಂತೆ ಪ್ರತಿಕ್ರಿಯಿಸಿದ ಮುತಾಲಿಕ್, ಇಂತಹ ಕೃತ್ಯಗಳನ್ನು ಖಂಡಿಸಬೇಕು. ಘಟನೆಗೆ ಕಾರಣರಾದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದರ ಜೊತೆಗೆ ಇಂತಹ ಪ್ರಕರಣಗಳು ಮರುಕಳಿಸದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಎಚ್ಚರಿಕೆ ವಹಿಸಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸುದೀಪ್, ಮಂಜುನಾಥ್, ರಘುಗೌಡ, ಮಂಜುನಾಥ ಬಾವಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಜ್ಯಕ್ಕೆ ಕೇಂದ್ರದಿಂದ ಬರಬೇಕಾದ ಅನುದಾನ ಬಿಡುಗಡೆಯಾಗುತ್ತಿಲ್ಲ: ಎನ್.ಎಸ್. ಬೋಸರಾಜು

ಎಂದು ಬೋಸರಾಜು ಒತ್ತಾಯಿಸಿದರು.

ಎಲ್‌ನಿನೊ ಪ್ರಭಾವದಿಂದ ರಾಜ್ಯದ ಹಲವು ಜಿಲ್ಲೆಗಳಲ್ಲಿ ಬರ ಪರಿಸ್ಥಿತಿ ಉಂಟಾಗಿದ್ದು, ಎನ್‌ಡಿಆರ್‌ಎಫ್ ನಿಯಮಗಳಂತೆ ರಾಜ್ಯ ಸರ್ಕಾರ ಕೇಂದ್ರಕ್ಕೆ ಬರ ಪರಿಸ್ಥಿತಿಯ ವರದಿ ಸಲ್ಲಿಸಿದೆ. ಕೇಂದ್ರದ ಅಧಿಕಾರಿಗಳು ವಿವಿಧ ಜಿಲ್ಲೆಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಅಧ್ಯಯನ ಮಾಡಿ ವರದಿ ನೀಡಲಿದ್ದಾರೆ ಎಂದರು.

ತುಂಗಭದ್ರ ಜಲಾಶಯದಲ್ಲಿ ಕುಡಿಯುವ ನೀರಿಗಾಗಿ 10 ಟಿಎಂಸಿ ನೀರನ್ನು ಕಾಯ್ದಿರಿಸಿ, ಉಳಿದ ನೀರನ್ನು ಕಾಲುವೆಗಳಿಗೆ ಹರಿಸಲಾಗುತ್ತಿದೆ. ರಾಯಚೂರು ಜಿಲ್ಲೆಗೆ ಬರುವ ಎಡದಂಡೆ ಕಾಲುವೆಗೆ ಪ್ರತಿದಿನ ಸುಮಾರು 1 ಟಿಎಂಸಿ ನೀರು ಹರಿಸಲಾಗುತ್ತಿದ್ದರೂ, ರೈತರು ಹತ್ತಿ, ಜೋಳ, ಗೋಧಿ ಬದಲಿಗೆ ಹೆಚ್ಚಾಗಿ ಭತ್ತ ಬೆಳೆಯುತ್ತಿರುವುದರಿಂದ ಕೆಳಭಾಗದ ರೈತರ ಜಮೀನುಗಳಿಗೆ ನೀರು ತಲುಪುವಲ್ಲಿ ಸಮಸ್ಯೆಯಾಗುತ್ತಿದೆ ಎಂದು ಹೇಳಿದರು.

ಈ ಕುರಿತು ಕೊಪ್ಪಳ ಮತ್ತು ರಾಯಚೂರು ಜಿಲ್ಲಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರ ನೇತೃತ್ವದಲ್ಲಿ ಸಭೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಕವಿತಾಳ ಮತ್ತು ಸಿರವಾರ ತಾಲೂಕುಗಳಲ್ಲಿ ರಿಂಗ್ ರೋಡ್ ಕಾಮಗಾರಿಗಳಿಗೆ ಮಂಜೂರಾತಿ ದೊರೆತಿದ್ದು, ಮುಂದಿನ ದಿನಗಳಲ್ಲಿ ಮಾನ್ವಿಗೂ ರಿಂಗ್ ರೋಡ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಜಿಲ್ಲೆಯಲ್ಲಿ ಹತ್ತಿ ಖರೀದಿ ಕೇಂದ್ರ ಆರಂಭಿಸುವಂತೆ ರಾಜ್ಯ ಸರ್ಕಾರದಿಂದ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ತುಂಗಭದ್ರ ನದಿ ನೀರಿನಲ್ಲಿ ಆಂಧ್ರಪ್ರದೇಶ ಮತ್ತು ತೆಲಂಗಾಣಕ್ಕೆ 16 ಟಿಎಂಸಿ ನೀರು ಬಿಡಬೇಕಾಗಿದ್ದು, ನದಿ ಪಾತ್ರದಲ್ಲಿ ಬೆಳೆ ಇಲ್ಲದ ಕಾರಣ ಬೇಸಿಗೆಯಲ್ಲಿ ಕುಡಿಯುವ ನೀರಿಗಾಗಿ ಮಾತ್ರ ನೀರು ಪಡೆಯುವುದಾಗಿ ಆಂಧ್ರ ಸರ್ಕಾರ ತಿಳಿಸಿದೆ. ಇದರಿಂದ ರಾಜ್ಯದ ಪಾಲಿನ ಸುಮಾರು ಅರ್ಧ ಟಿಎಂಸಿ ನೀರನ್ನು ಬೇಸಿಗೆಯಲ್ಲಿ ಕುಡಿಯುವ ಉದ್ದೇಶಕ್ಕೆ ಬಳಸಿಕೊಳ್ಳಲು ಅವಕಾಶ ದೊರೆಯಲಿದೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಈ ಭಾಗದ ನೀರಾವರಿ ಸಮಸ್ಯೆ ಪರಿಹಾರಕ್ಕಾಗಿ ಕವಿತಾಳ ಸಮೀಪ ಜಲಾಶಯ ನಿರ್ಮಿಸಿ ಕೃಷ್ಣಾ ನದಿ ನೀರನ್ನು ಸಂಗ್ರಹಿಸಿ 76, 85 ಹಾಗೂ 89ನೇ ಉಪಕಾಲುವೆಗಳಿಗೆ ನೀರು ಹರಿಸುವ ಯೋಜನೆ ರೂಪಿಸಲಾಗುತ್ತಿದೆ. ಮಾನ್ವಿ ಪಟ್ಟಣದ ಕೆರೆಯಲ್ಲಿ ಪ್ರಸ್ತುತ 4.5 ಮೀಟರ್ ನೀರು ಸಂಗ್ರಹವಿದ್ದು, ಕಾತರಕಿ ನದಿಯಿಂದ ರಬಣಕಲ್ ಕೆರೆಗೆ ಹೊಸ ಪೈಪ್‌ಲೈನ್ ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು. ಅಮೃತ್-2 ಯೋಜನೆಯಡಿ ನಡೆಯುತ್ತಿರುವ ಪೈಪ್‌ಲೈನ್ ಕಾಮಗಾರಿಯನ್ನು ಇನ್ನೂ ಎರಡು ತಿಂಗಳಲ್ಲಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಹಂಪಯ್ಯ ನಾಯಕ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಖಾಲಿದ್ ಖಾದ್ರಿ ಹಾಗೂ ರೌಡೂರು ಮಹಾಂತೇಶ ಸ್ವಾಮಿ ಉಪಸ್ಥಿತರಿದ್ದರು.

# ಸೆ. 30ರವರೆಗೆ ನಿರ್ಮಲ ನಿಲಯ ಅಭಿಯಾನ

ರಾಯಚೂರು ಸೆ. 16 (ಕರ್ನಾಟಕ ವಾರ್ತೆ): ಜಿಲ್ಲೆಯ ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಗಳು ಹಾಗೂ ಶಿಕ್ಷಣ ಇಲಾಖೆ ವತಿಯಿಂದ ನಿರ್ವಹಿಸಲಾಗುತ್ತಿರುವ ವಸತಿ ನಿಲಯ, ವಸತಿ ಶಾಲೆ, ಆಶ್ರಮ ಶಾಲೆಗಳಲ್ಲಿ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡುವ ಮೂಲಕ ನಿಲಯಾರ್ಥಿಗಳಿಗೆ ಶುಚಿ ಹಾಗೂ ರುಚಿಕರವಾದ ಆಹಾರ ಪೂರೈಸಲು ಸೆಪ್ಟಂಬರ್ 30ರವರೆಗೆ ನಿರ್ಮಲ ನಿಲಯ ಅಭಿಯಾನ ಹಮ್ಮಿಕೊಳ್ಳಲು ಯೋಜಿಸಿದೆ.

ಈ ಅಭಿಯಾನದ ಅಂಗವಾಗಿ ಸೆಪ್ಟಂಬರ್ 15ರಂದು ರಾಯಚೂರು ನಗರದ ಪಂಡಿತ ಸಿದ್ದರಾಮ ಜಂಬದಿನ್ನಿ ರಂಗಮದಿರದಲ್ಲಿ ವಸತಿ ನಿಲಯ, ವಸತಿ ಶಾಲೆ, ಆಶ್ರಮ ಶಾಲೆಗಳಲ್ಲಿ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡುವ ಉದ್ದೇಶದಿಂದ ನಿರ್ಮಲ ನಿಲಯ ಅಭಿಯಾನದ ಪೋಸ್ಟರ್‌ಗಳನ್ನು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಸೇರಿದಂತೆ ಇತರೆ ಗಣ್ಯರಿಂದ ಬಿಡುಗಡೆಗೊಳಿಸಿದರು.

ಈ ಕಾರ್ಯಕ್ರಮಕ್ಕೆ ಉಲ್ಲೇಖಿತ ಆದೇಶದಲ್ಲಿ ನೇಮಿಸಲಾದ ನೋಡಲ್ ಅಧಿಕಾರಿಗಳ ಪಟ್ಟಿ ಹಾಗೂ ಪರಿವೀಕ್ಷಣಾ ಚೆಕ್ ಲಿಸ್ಟ್ನ್ನು ಪರಿಷ್ಕರಿಸಿ ನೇಮಿಸಿರುವ ನೋಡಲ್ ಅಧಿಕಾರಿಗಳು ಅವರಿಗೆ ವಹಿಸಿರುವ ವಸತಿನಿಲಯ, ಶಾಲೆಗಳಿಗೆ ಅಭಿಯಾನದ ಅವಧಿಯಲ್ಲಿ ಬೆಳಗಿನ ಉಪಹಾರ, ಮಧ್ಯಾಹ್ನದ ಊಟ, ರಾತ್ರಿ ಊಟದ ವೇಳೆಯಲ್ಲಿ ಕಡ್ಡಾಯವಾಗಿ ಭೇಟಿ ನೀಡಿ ಅಡಿಗೆ ಕೋಣೆ, ದಾಸ್ತಾನುಕೊಠಡಿ ಹಾಗೂ ನೈರ್ಮಲ್ಯ/ತಯಾರಿಸಲಾಗುವ ಆಹಾರದ ಗುಣಮಟ್ಟ ಕುರಿತು ಪರಿವೀಕ್ಷಣೆ ನಡೆಸಿ ಈ ಆದೇಶಕ್ಕೆ ಲಗತ್ತಿಸಿರುವ ನಮೂನೆಯಲ್ಲಿ ಮಾಹಿತಿಯನ್ನು ದಿನಾಂಕ:01.10.2026ಕ್ಕೆ ಖುದ್ದಾಗಿ ರಾಯಚೂರು ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಇವರಿಗೆ ಸಲ್ಲಿಸುವಂತೆ ಜಿಲ್ಲಾ ಪಂಚಾಯತ್ ಪ್ರಕಟಣೆ ತಿಳಿಸಿದೆ.

# ಮಹಾನಗರ ಪಾಲಿಕೆಯಿಂದ ವೈಯಕ್ತಿಕ ಚಟುವಟಿಕೆಗೆ ಅರ್ಜಿ ಆಹ್ವಾನ

ರಾಯಚೂರು ಸೆ. 16 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆಯ ವತಿಯಿಂದ 2024-25 ಹಾಗೂ 2025-26ನೇ ಸಾಲಿನ ಅನುದಾನದಲ್ಲಿ ಶೇ.7.25 ಯೋಜನೆಯ ಇತರೆ ಹಿಂದುಳಿದ ಜನಾಂಗದ ವೈಯಕ್ತಿಕ ಚಟುವಟಿಕೆಗಳನ್ನು ಒದಗಿಸಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2024-25ನೇ ಸಾಲಿನನಲ್ಲಿ ಇತರೆ ಹಿಂದುಳಿದ ಜನಾಂಗದ ಬಿ.ಇಡಿ/ಬಿಪಿಇಎಡ್‌ತರೆ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ ನೀಡುವುದು ಒಬ್ಬರಿಗೆ ರೂ.6000ಗಳಂತೆ 13 ಜನರಿಗೆ ಹಾಗೂ 2025-26ನೇ ಸಾಲಿನ ಇತರೆ ಹಿಂದುಳಿದ ಜನಾಂಗದ ಬಿ.ಇಡಿ/ಬಿಪಿಇಎಡ್‌ತರೆ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ ನೀಡುವುದು ಒಬ್ಬರಿಗೆ ರೂ.6000 ಗಳಂತೆ 13 ಜನರಿಗೆ ಒದಗಿಸಲಾಗುವುದು.

ದಾಖಲಾತಿಗಳು: ನಿಗದಿತ ನಮೂನೆಯಲ್ಲಿ ಅರ್ಜಿ, ಬಾವಚಿತ್ರ-1, ಹಿಂದಿನ ವರ್ಷದ ಅಂಕಪಟ್ಟಿ, ಅದ್ಯಯನ ಪ್ರಮಾಣಪತ್ರ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ಆದಾಯ ಪ್ರಮಾಣ ಪತ್ರ, ಪ್ರವೇಶ ರಶೀದಿ, ಬ್ಯಾಂಕ್ ಪಾಸ್ ಬುಕ್‌ನೊಂದಿಗೆ ಸೆಪ್ಟಂಬರ್ 23ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೆ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೆ ನೇರವಾಗಿ ವಿಭಾಗದ ಸಿಬ್ಬಂಧಿಯವರು ತಿರಸ್ಕೃತ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಛೇರಿ ವೆಬ್‌ಸೈಟ್ ವಿಳಾಸ: www.raichurcity.gov.in ನೋಟಿಫಿಕೇಶನಲ್ಲಿ ನೋಟ ಮಾಡಿ ಮತ್ತು ಕಚೇರಿ ನೋಟಿಸ್ ಬೋರ್ಡ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 16 (ಕರ್ನಾಟಕ ವಾರ್ತೆ): ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿಲ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ನಾಮ ನಿರ್ದೇಶನಗಳನ್ನು ಸಲ್ಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮಕ್ಕಳ ದಿನಾಚರಣೆ-2026ರ ಪ್ರಯುಕ್ತ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದಿ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ 6 ರಿಂದ 18 ವರ್ಷದೊಳಗಿನ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುತ್ತದೆ. ಪ್ರಕರಣವು 01-08-2025 ರಿಂದ 01-07-2026 ರೊಳಗೆ ನಡೆದಿರಬೇಕು. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000/-ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.

ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 05 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ.25,000/- ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ. 1,00,000/- ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು ದಿನಾಂಕ:24-09-2026 ರವರೆಗೆ ಅರ್ಜಿಗಳನ್ನು ಸ್ವೀಕರಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು ಉಪ ನಿರ್ದೇಶಕರ ಕಛೇರಿ ಮಂತ್ರಾಲಯ ರೋಡ್ ಐ.ಡಿ.ಎಸ್.ಎಮ್.ಟಿ ಲೇಔಟ್ ಎದುರುಗಡೆ ರಾಯಚೂರು ಇವರನ್ನು ಕಚೇರಿ ವೇಳೆಯಲ್ಲಿ ಭೇಟಿ ನೀಡಬಹುದಾಗಿದೆ ಅಥವಾ ದೂರವಾಣಿ ಸಂಖ್ಯೆ: 08532-295646ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಓಂ ಸಾಯಿ ಧ್ಯಾನ ಮಂದಿರದಲ್ಲಿ ಸಿಟಿ ಲೈಟ್ಸ್ ಚಿತ್ರದ ಪೋಸ್ಟರ್ ಬಿಡುಗಡೆ



ರಾಯಚೂರು: ಸೆಪ್ಟೆಂಬರ್ 18ರಂದು ಬಿಡುಗಡೆಯಾಗಲಿರುವ ನಟ-ನಿರ್ದೇಶಕ ದುನಿಯಾ ವಿಜಯ್ ಅವರ ಸಿಟಿ ಲೈಟ್ಸ್ ಚಿತ್ರದ ಪೋಸ್ಟರ್ ಅನ್ನು ನಗರದ ಓಂ ಸಾಯಿ ಧ್ಯಾನ ಮಂದಿರದಲ್ಲಿ ಬಿಡುಗಡೆ ಮಾಡಲಾಯಿತು.

ಸದ್ಗುರು ಶ್ರೀ ಸಾಯಿನಾಥನ ಸನ್ನಿಧಿಯಲ್ಲಿ ಚಿತ್ರದ ಯಶಸ್ಸಿಗಾಗಿ ವಿಶೇಷ ಪೂಜೆ ಸಲ್ಲಿಸಿ, ನಾಯಕ ನಟ ಯುವ ರಾಜ್‌ಕುಮಾರ್ ಸೇರಿದಂತೆ ಚಿತ್ರತಂಡಕ್ಕೆ ಯಶಸ್ಸು ದೊರೆಯಲಿ ಎಂದು ಪ್ರಾರ್ಥಿಸಲಾಯಿತು.

ಸಾಯಿ ಕಿರಣ್ ಗುರುಜಿ ಮಾತನಾಡಿ, ದುನಿಯಾ ವಿಜಯ್ ಅವರು ಮುಂದಿನ ದಿನಗಳಲ್ಲಿ ಓಂ ಸಾಯಿ ಧ್ಯಾನ ಮಂದಿರಕ್ಕೆ ಭೇಟಿ ನೀಡುವ ಇಚ್ಛೆ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿ, ಚಿತ್ರತಂಡಕ್ಕೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ರಾಜ್ಯ ಕಾರ್ಯದರ್ಶಿ ಶಾಂತುಗೌಡ ಗುತ್ತೇದಾರ್, ವೀರೇಶ್, ಸುನೀಲ್ ದದ್ದಲ್, ಸುರೇಶ್ ಪಾಟೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪರಿಷ್ಕೃತ ಮತದಾರ ಪಟ್ಟಿಯಲ್ಲಿ ಹೆಸರು ಬಿಟ್ಟಿದ್ದರೆ ನೋಂದಾಯಿಸಿಕೊಳ್ಳಿ: ಡಾ. ಸತೀಶ್

ರಾಯಚೂರು, ಸೆ.16: ಪರಿಷ್ಕೃತ ಸಮಗ್ರ ಮತದಾರ ಪಟ್ಟಿಯಲ್ಲಿ ಹೆಸರು ಬಿಟ್ಟುಹೋಗಿರುವ ಮತದಾರರು ಅಗತ್ಯ ದಾಖಲೆಗಳೊಂದಿಗೆ ತಮ್ಮ ಹೆಸರನ್ನು ತಪ್ಪದೆ ಸೇರ್ಪಡೆಗೊಳಿಸಿಕೊಳ್ಳಬೇಕು ಎಂದು ರಾಯಚೂರು ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯದ ಆಶ್ರಯದಲ್ಲಿ ನಗರದ ಜಹೀರಾಬಾದ್ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಜಾಗೃತಿ ಜಾಥಾದಲ್ಲಿ ಅವರು ಮಾತನಾಡಿದರು.

ಮತದಾರ ಪಟ್ಟಿಯಲ್ಲಿ ತಮ್ಮ ಹೆಸರು ಇಲ್ಲದಿರುವುದು ಗಮನಕ್ಕೆ ಬಂದಲ್ಲಿ ಸಾರ್ವಜನಿಕರು ಆತಂಕಕ್ಕೆ ಒಳಗಾಗದೆ ಸಮೀಪದ ಬೂತ್ ಮಟ್ಟದ ಅಧಿಕಾರಿಯನ್ನು (ಬಿಎಲ್‌ಒ) ಸಂಪರ್ಕಿಸಿ ಅಗತ್ಯ ದಾಖಲೆಗಳನ್ನು ಸಲ್ಲಿಸುವ ಮೂಲಕ ಹೆಸರು ನೋಂದಾಯಿಸಿಕೊಳ್ಳಬೇಕು. 2002ರ ಮತದಾರ ಪಟ್ಟಿಗೆ ಸಂಬಂಧಿಸಿದಂತೆ



ಹೆಸರು ಬಿಟ್ಟುಹೋಗಿರುವವರು ಕೂಡ ಸಂಬಂಧಿಸಿದ ದಾಖಲೆಗಳೊಂದಿಗೆ ಬಿಎಲ್‌ಒ ಅವರನ್ನು ಭೇಟಿ ಮಾಡಿ ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

18 ವರ್ಷ ಪೂರ್ಣಗೊಂಡ ಯುವಕ-ಯುವತಿಯರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವ ಮೂಲಕ ಮತದಾನದ ಹಕ್ಕು ಪಡೆಯಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಹೀರಾಬಾದ್ ವೈದ್ಯಾಧಿಕಾರಿ ಡಾ. ಶ್ವೇತಾಂಬರಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಎಚ್. ದಾಸಪ್ಪನವರ, ತರಬೇತಿ ವೈದ್ಯರಾದ ಡಾ. ಕಾವ್ಯ, ಡಾ. ಸ್ನೇಹ, ಡಾ. ಅಮೀತ್, ಡಾ. ಕಾರ್ತಿಕ್, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ಪುಂಡಲೀಕ ಗಂಜಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ., ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸುರೇಶ್, ಶುಶ್ರೂಷಣಾಧಿಕಾರಿ ಸುವರ್ಣ, ಔಷಧ ತಜ್ಞೆ ಶಬನಮ್, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಾದ ಮಲ್ಲೇಶ್ವರಿ, ಶಾರದಾ, ಶಶಿಕಲಾ, ಆರೋಗ್ಯ ನಿರೀಕ್ಷಣಾಧಿಕಾರಿ ಶ್ರುತಿ, ಎಂಎಲ್‌ಡಬ್ಲ್ಯು ಅನಂತ್ ಕುಮಾರ್, ಪ್ರಯೋಗಶಾಲಾ ತಜ್ಞರಾದ ಹಬೀಬ್ ಖಾನ್‌ಸಾಬ್, ಅತಾಹುಲ್ಲಾ ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ವಿಮೋಚನೆಯಿಂದ ವಿಕಾಸದತ್ತ ಸಮೃದ್ಧ ಪಯಣ

ಪ್ರತಿ ವರ್ಷ ಸೆಪ್ಟೆಂಬರ್ 17ರಂದು ಆಚರಿಸಲಾಗುವ 'ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ' (ಹೈದರಾಬಾದ್ ಕರ್ನಾಟಕ ವಿಮೋಚನಾ ದಿನ) ಈ ಭಾಗದ ಜನರ ತ್ಯಾಗ, ಬಲಿದಾನ ಮತ್ತು ದೇಶ ಪ್ರೇಮದ ಐತಿಹಾಸಿಕ ಸಂಕೇತವಾಗಿದೆ. 1947ರ ಆಗಸ್ಟ್ 15ರಂದು ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕರೂ, ಹೈದರಾಬಾದ್ ನಿಜಾಮನ ಆಳ್ವಿಕೆಯಲ್ಲಿದ್ದ ಈ ಪ್ರದೇಶವು ಸ್ವಾತಂತ್ರ್ಯದ ಬೆಳಕನ್ನು ಕಾಣಲು ಮತ್ತಷ್ಟು ದಿನಗಳ ವರೆಗೆ ಕಾಯಬೇಕಾಯಿತು.

ಬ್ರಿಟಿಷರು ಭಾರತದಿಂದ ನಿರ್ಗಮಿಸುವಾಗ ನಮ್ಮ ದೇಶದಲ್ಲಿದ್ದ ವಿವಿಧ ಸಂಸ್ಥಾನಗಳಿಗೆ ಭಾರತ ಒಕ್ಕೂಟವನ್ನು ಸೇರಲು ಅಥವಾ ಸ್ವತಂತ್ರವಾಗಿರಲು ಅವಕಾಶ ನೀಡಿದ್ದರು. ಹೈದರಾಬಾದ್‌ನ ನಿಜಾಮ ಮೀರ್ ಉಸ್ಮಾನ್ ಅಲಿ ಖಾನ್ ತನ್ನ ಸಂಸ್ಥಾನವನ್ನು ಸ್ವತಂತ್ರವಾಗಿಡಲು ನಿರ್ಧರಿಸಿದನು. ನಿಜಾಮನ ಬೆಂಬಲವಿದ್ದ 'ರಜಾಕಾರರು' ಎಂಬ ಸಶಸ್ತ್ರ ಪಡೆ ನಾಗರಿಕರ ಮೇಲೆ ಅಪಾರ ದೌರ್ಜನ್ಯ ಎಸಗಿತು. ಇದನ್ನು ವಿರೋಧಿಸಿ ನಮ್ಮ ಭಾಗದ ರಮಾನಂದ ತೀರ್ಥ, ಸರ್ದಾರ್ ಶರಣಗೌಡ ಇನಾಂದಾರ್, ಸ್ವಾಮಿ ರಾಮಾನಂದ ತೀರ್ಥ, ಜಯತೀರ್ಥ ರಾಜಪುರೋಹಿತ್ ಸೇರಿದಂತೆ ಅನೇಕ ಧುರೀಣರು ಮತ್ತು ಸಾವಿರಾರು ಯುವಕರು ಹೋರಾಟಕ್ಕೆ ಧುಮುಕಿದರು.

ಪರಿಸ್ಥಿತಿ ಕೈಮೀರುತ್ತಿದ್ದಂತೆ ಭಾರತದ ಅಂದಿನ ಗೃಹ ಸಚಿವರಾಗಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಆಪರೇಷನ್ ಪೋಲೋ ಹೆಸರಿನ ಪೊಲೀಸ್ ಕಾರ್ಯಾಚರಣೆಗೆ ಆದೇಶಿಸಿದರು. 1948ರ ಸೆಪ್ಟೆಂಬರ್ 13ರಂದು ಪ್ರಾರಂಭವಾದ ಈ ಕಾರ್ಯಾಚರಣೆಯು ಸೆಪ್ಟೆಂಬರ್ 17ರಂದು ನಿಜಾಮನ ಶರಣಾಗತಿಯೊಂದಿಗೆ ಮುಕ್ತಾಯವಾಯಿತು. ಆ ಮೂಲಕ ಈ ಪ್ರದೇಶವು ಹೈದರಾಬಾದ್ ರಾಜ್ಯದಿಂದ ವಿಮೋಚನೆಗೊಂಡು ಭಾರತ ಒಕ್ಕೂಟಕ್ಕೆ ಸೇರ್ಪಡೆಯಾಯಿತು.

ಕಲ್ಯಾಣ ಕರ್ನಾಟಕ ಮರುನಾಮಕರಣ: ಬೀದರ್, ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳನ್ನೊಳಗೊಂಡ ಈ ಪ್ರದೇಶವನ್ನು ಹಿಂದೆ 'ಹೈದರಾಬಾದ್ -ಕರ್ನಾಟಕ' ಎಂದು ಕರೆಯಲಾಗುತ್ತಿತ್ತು. ಆದರೆ 'ಹೈದರಾಬಾದ್' ಎಂಬ ಹೆಸರು ಗುಲಾಮಗಿರಿಯ ಕುರುಹಾಗಿ ಉಳಿದಿದೆ ಎಂಬ ಭಾವನೆಯಿಂದ ಮತ್ತು 12ನೇ ಶತಮಾನದ ಬಸವಣ್ಣನವರ ಕರ್ಮಭೂಮಿಯಾದ ಶರಣರ ಸಂಸ್ಕೃತಿಯನ್ನು ಸ್ಮರಿಸುವ ಉದ್ದೇಶದಿಂದ 2019ರ ಸೆಪ್ಟೆಂಬರ್‌ನಲ್ಲಿ ಈ ಪ್ರದೇಶಕ್ಕೆ 'ಕಲ್ಯಾಣ ಕರ್ನಾಟಕ' ಎಂದು ಅಧಿಕೃತವಾಗಿ ಅಂದಿನ ಸರ್ಕಾರ ಮರುನಾಮಕರಣ ಮಾಡಲಾಯಿತು.




ವಿಶೇಷ ಸ್ಥಾನಮಾನ (ವಿಧಿ 371(ಜೆ)): ಪ್ರಾದೇಶಿಕ ಅಸಮಾನತೆಯನ್ನು ಹೋಗಲಾಡಿಸಲು ಈ ಭಾಗದ ಹಲವಾರು ನಾಯಕರ ಹೋರಾಟದ ಫಲವಾಗಿ ಮತ್ತು ಈ ಭಾಗದ ಸಾಮಾಜಿಕ-ಆರ್ಥಿಕ ಬೆಳವಣಿಗೆಗೆ ವೇಗ ನೀಡಲು ಸಂವಿಧಾನಕ್ಕೆ ವಿಧಿ 371 (ಜೆ) ತಿದ್ದುಪಡಿ ತರಲಾಯಿತು. ಇದರಿಂದಾಗಿ ಈ ಭಾಗದ ಯುವಜನರಿಗೆ ಶಿಕ್ಷಣ ಸಂಸ್ಥೆಗಳಲ್ಲಿ ಹಾಗೂ ಸರ್ಕಾರಿ ಉದ್ಯೋಗಗಳಲ್ಲಿ ವಿಶೇಷ ಮೀಸಲಾತಿ ದೊರೆಯುತ್ತಿದೆ. ಅಲ್ಲದೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಮೂಲಕ ಮೂಲಸೌಕರ್ಯ, ಶಾಲಾ-ಕಾಲೇಜುಗಳು, ಆಸ್ಪತ್ರೆಗಳು ಮತ್ತು ರಸ್ತೆಗಳ ನಿರ್ಮಾಣಕ್ಕೆ ಪ್ರತ್ಯೇಕ ಅನುದಾನ ನೀಡಲಾಗುತ್ತಿದೆ.

ಕಲ್ಯಾಣ ಕರ್ನಾಟಕ ಭಾಗದ ಪ್ರಮುಖ ಪ್ರವಾಸಿ ತಾಣಗಳು: ರಾಯಚೂರು ಕೋಟೆ: ನಗರದ ಮಧ್ಯೆ ಇರುವ ಈ ಐತಿಹಾಸಿಕ ಕೋಟೆಯು ವಿಶಿಷ್ಟ ಶಿಲ್ಪಕಲೆ ಮತ್ತು ಕಲ್ಲಿನ ರಚನೆಗಳಿಗೆ ಪ್ರಸಿದ್ಧವಾಗಿದೆ. ಪಂಚಮುಖಿ ಗಾಣದಾಳ: ರಾಯಚೂರು ಸಮೀಪವಿರುವ ಪವಿತ್ರ ಕ್ಷೇತ್ರವಾಗಿದ್ದು, ಇಲ್ಲಿ ಪಂಚಮುಖಿ ಪ್ರಾಣದೇವರ (ಆಂಜನೇಯ) ಸನ್ನಿಧಿಯಿದೆ. ದೇವಸೂಗೂರು ಸುಗೂರೇಶ್ವರ ದೇವಾಲಯ: ಕೃಷ್ಣಾ ನದಿಯ ದಡದಲ್ಲಿರುವ ಈ ಧಾರ್ಮಿಕ ಕೇಂದ್ರಕ್ಕೆ ಹತ್ತಿರದಲ್ಲೇ ಭಕ್ತರು ಭೇಟಿ ನೀಡುತ್ತಾರೆ. ಮಸ್ಕಿ ಅಶೋಕನ ಚಕ್ರವರ್ತಿಯ ಶಿಲಾಶಾಸನಗಳು ದೊರೆತಿರುವ ಐತಿಹಾಸಿಕ ಹಾಗೂ ಪುರಾತತ್ವ ಮಹತ್ವದ ತಾಣ. ಜಲದುರ್ಗ ಕೋಟೆ: ಕೃಷ್ಣಾ ನದಿಯ ಮಧ್ಯೆ ಬೆಟ್ಟದ ಮೇಲೆ ನೆಲೆಸಿರುವ ಸುಂದರ ಹಾಗೂ ಐತಿಹಾಸಿಕ ಕೋಟೆ. ಕುರುವಾಪುರ: ಕೃಷ್ಣಾ ನದಿ ತೀರದಲ್ಲಿರುವ ಭಗವಾನ್ ದತ್ತಾತ್ರೇಯರ ಪವಿತ್ರ ಕ್ಷೇತ್ರ. ವಿಜಯನಗರ ಜಿಲ್ಲೆಯ ಯುನೆಸ್ಕೋ ವಿಶ್ವ ಪಾರಂಪರಿಕ ತಾಣವಾದ ಹಂಪಿ ಜಗತ್ತಿನ ಪ್ರವಾಸಿಗರ ಮೆಚ್ಚಿನ ತಾಣವಾಗಿದೆ. ವಿಶ್ವಪರಂಪರೆಯಲ್ಲಿ ಇದು ಪ್ರೇಕ್ಷಣೀಯ ಸ್ಥಳವಾಗಿದ್ದು, ದೇಶ-ವಿದೇಶಿಗರನ್ನು ಆಕರ್ಷಿಸುತ್ತಿದೆ. ಇಲ್ಲಿ ಸ್ಥಾಪಿಸಲಾಗಿರುವ ಹಂಪಿಯ ಕಲ್ಲಿನ ರಥ ಹಾಗೂ ಇತರ ಭವ್ಯ ಸ್ಮಾರಕಗಳು ಪ್ರವಾಸಿಗರ ಕಣ್ಮನ ಸೆಳೆಯುತ್ತದೆ.

ಕಿಷ್ಕಂಧೆ: ಕೊಪ್ಪಳ ಜಿಲ್ಲೆಯ ಕಿಷ್ಕಿಂಧೆ ನಗರಿಯಲ್ಲಿ ಶ್ರೀರಾಮನು ಸುಗ್ರೀವ ರಾಜನಿಗೆ ಭೇಟಿಯಾದನೆಂದು ಮತ್ತು ಶ್ರೀರಾಮನ ಪರಮಭಕ್ತನಾದ ಹನುಮಂತನು ಇಲ್ಲಿನ ಅಂಜನಾದ್ರಿ ಬೆಟ್ಟದಲ್ಲಿ ಜನ್ಮತಾಳಿದನೆಂದು ಇತಿಹಾಸದಿಂದ ತಿಳಿದು ಬರುತ್ತದೆ. ಸುಮಾರು 575 ಮೆಟ್ಟಲುಗಳನ್ನೇರಿ ಅಂಜನಾದ್ರಿಯನ್ನು ಹತ್ತಿದರೆ ಬೆಣಚು ಕಲ್ಲಿನ ದೊಡ್ಡ ಬಂಡೆಗಲ್ಲುಗಳಿದ ಕೂಡಿದ ಬೆಟ್ಟ ನಮಗೆ ಹನುಮಂತನ ಬೃಹತ್ ವ್ಯಕ್ತಿತ್ವದೊಂದಿಗೆ ಗೋಚರಿಸುತ್ತದೆ. ಅಲ್ಲದೇ ದಕ್ಷಿಣ ಭಾರತದ ಮಾನಸ ಸರೋವರವೆಂದು ಕರೆಸಿಕೊಳ್ಳುವ ಪಂಪಾಸರೋವರವು ಬಿಳಿಬಣ್ಣದ ತಾವರೆಗಳಿಂದ ಆವೃತವಾಗಿರುವ ಮನಮೋಹಕ ದೃಶ್ಯ ಲಭಿಸುತ್ತದೆ.

ಶಹಾಪೂರ: ಯಾದಗಿರಿ ಜಿಲ್ಲೆಯ ಶಹಾಪೂರ ಪಟ್ಟಣದಲ್ಲಿರುವ ಕೋಟೆಯ ಬೆಟ್ಟದ ಮೇಲೆ ಪವಡಿಸಿರುವ ಮಲಗಿದ ಬುದ್ಧನ ದೃಶ್ಯ ಈ ಬೆಟ್ಟ ಪ್ರಕೃತಿದತ್ತವಾಗಿ ನೈಜವಾಗಿ ಬುದ್ಧನೇ ಮಲಗಿದ್ದಾನೆ ಎಂದು ಭಾಸವಾಗುತ್ತದೆ. ಬೆಟ್ಟವೇ ಬುದ್ಧನು ಮಲಗಿರುವಂತೆ ರೂಪುಗೊಂಡಿರುವುದು ಅದ್ಭುತವೇ ಸರಿ. ದೂರದಿಂದ ನೋಡಿದರೆ, ಬುದ್ಧನ ಹಣೆ, ಮೂಗು ಮತ್ತು ಎದೆಯ ಮೇಲೆ ಕೈ ಇಟ್ಟುಕೊಂಡು ನಿದ್ರಾವಸ್ಥೆಯಲ್ಲಿರುವಂತೆ ಗೋಚರಿಸುತ್ತದೆ. ಇದು ಪ್ರಕೃತಿಯ ಅದ್ಭುತ ಶಿಲ್ಪಕಲೆಯಾಗಿದೆ.

ಸುರಪುರ: ಯಾದಗಿರಿ ಜಿಲ್ಲೆಯ ಸರಪುರ ಕಲ್ಯಾಣ ಪ್ರದೇಶವು ನಿಜವಾಗಿಯೂ ಪ್ರಕೃತಿ ಸೌಂದರ್ಯದ ಗಣಿಯಾಗಿದೆ. ಗಂಗಾವತಿಯಿದ ಸುರಪೂರ ಮಾರ್ಗದುದ್ದಕ್ಕೂ ಅನೇಕ ಅದ್ಭುತವಾದ ಶಿಲೆಗಳನ್ನು ಕಾಣಬಹುದು. ಈ ಬಂಡೆಗಲ್ಲಿನ ಶಿಲೆಗಳು ಒಂದರ ಮೇಲೊಂದು ಪವಡಿಸಿ ಸಾವಿರಾರು ವರ್ಷಗಳಿಂದ ತಮ್ಮ ಸಮತೋಲನೆಯನ್ನು ಕಾಪಾಡಿಕೊಂಡು ಉರುಳದೇ ನಿಂತಿರುವುದು ಆಶ್ಚರ್ಯಕರವಾಗಿದೆ.

ಬೋನಾಳ ಕೆರೆ: ಈ ಭಾಗದ ಇನ್ನೊಂದು ಪ್ರೇಕ್ಷಣಿಯ ಸ್ಥಳವೆಂದರೆ ಬೋನಾಳ ಗ್ರಾಮದ ಹತ್ತಿರ ಇರುವ ಕೆರೆ ಹಾಗೂ ಅಲ್ಲಿನ ಪಕ್ಷಿಧಾಮ. ಸುಮಾರು ಎರಡು ಚದುರ ಮೈಲು ನೀರಿನಿಂದಾವೃತವಾದ ಈ ಕೆರೆಯನ್ನು ಕ್ರಿ.ಶ. 1844 ರಲ್ಲಿ ಬ್ರಿಟೀಷರು ಪುನಃ ನಿರ್ಮಾಣ ಮಾಡಿದ್ದರೆಂದು ತಿಳಿದು ಬರುತ್ತದೆ. ಇಲ್ಲಿ ಆಸ್ಟ್ರೇಲಿಯಾ, ಅರ್ಜೆಂಟೈನಾ, ನೈಜೇರಿಯಾ ಮತ್ತು ಶ್ರೀಲಂಕಾ ದೇಶಗಳಿಂದ ವಲಸೆ ಬಂದ ಪಕ್ಷಿಗಳನ್ನು ನಾವು ಕಾಣಬಹುದು. ವಿಶೇಷವಾಗಿ ಈ ಪಕ್ಷಿಗಳ ಸಂಖ್ಯೆ ನವೆಂಬರ್ ತಿಂಗಳಿನಿದ ಜನವರಿವರೆಗೆ ಹೆಚ್ಚಾಗಿರುತ್ತವೆ. ರಾಜ್ಯದ ಅತಿ ದೊಡ್ಡ ಪಕ್ಷಿಧಾಮವಾಗಿದೆ.

ಕೊಳ್ಳೂರು: ಗುಲಬರ್ಗಾ ಮಾರ್ಗ ಮಧ್ಯದಲ್ಲಿ ಕೃಷ್ಣಾನದಿಯ ದಂಡೆಯ ಮೇಲೆ ಕೊಳ್ಳೂರು ಎಂಬ ಗ್ರಾಮವಿದೆ. ಇಲ್ಲಿ ಕೋಹಿನೂರು ವಜ್ರ ದೊರಕಿರುವುದು ತಿಳಿದು ಬರುತ್ತದೆ. ಇಂದಿಗೂ ಸಹ ಅನೇಕ ವಿದೇಶಿ ಕಂಪನಿಗಳು ಈ ಖನಿಜ ಸಂಪತ್ತಿನ ಹುಡುಕಾಟಕ್ಕೋಸ್ಕರ ಸರ್ವೇಕ್ಷಣೆ ಮಾಡುತ್ತಿರುವುದು ಈ ಭಾಗದ ಸಮೃದ್ಧಿಯ ದ್ಯೋತಕವಾಗಿದೆ.



ತುಂಗ ಬಿಂಬ
– ರಮೇಶ ಗೌಡೂರು
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ರಾಯಚೂರು.

# "ವಿಮೋಚನೆಯ ಇತಿಹಾಸ ಕೇವಲ ಹಿಂದಿನ ನೆನಪಲ್ಲ;ಅದು ಸ್ವಾಭಿಮಾನದಿಂದ ಭವಿಷ್ಯ ಕಟ್ಟುವ ಸ್ಫೂರ್ತಿ."

## ವಿಮೋಚನೆಯ ನೆನಪು, ಸ್ವಾಭಿಮಾನದ ಹೆಜ್ಜೆ ಸೆಪ್ಟೆಂಬರ್ 17 ತ್ಯಾಗದ ಹೋರಾಟಕ್ಕೆ ನಮನ:

ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನದ ಫಲವಾಗಿ ಭಾರತ ದೇಶಕ್ಕೆ 1947 ಆಗಸ್ಟ್ 15ರಂದು ಸ್ವಾತಂತ್ರ್ಯ ಸಿಕ್ಕರೆ ಹೈದರಾಬಾದ್ ಪ್ರಾಂತ್ಯಕ್ಕೆ ಒಂದು ವರ್ಷ ತಡವಾಗಿ, ಅಂದರೆ 1948 ಸೆಪ್ಟೆಂಬರ್ 17 ರಂದು ಸ್ವಾತಂತ್ರ್ಯ ದೊರೆಯಿತು. ಕಲ್ಯಾಣ ಕರ್ನಾಟಕ ವಿಮೋಚನೆಗೂ ಸಾಕಷ್ಟು ರಕ್ತಸಿಕ್ತವಾದ ಇತಿಹಾಸವಿದೆ.

1947 ಆಗಸ್ಟ್ 15ರಂದು ಭಾರತ ದೇಶ ಸ್ವತಂತ್ರವಾಯಿತು. ದೇಶದ ಹಲವು ರಾಜರು ಭಾರತದ ಒಕ್ಕೂಟಕ್ಕೆ ತಮ್ಮ ರಾಜ್ಯವನ್ನು ಸೇರಿಸಿದರು. ಮೊಂಡುತನದ ಹೈದರಾಬಾದ್ ಪ್ರಾಂತ್ಯದ ರಾಜ ನಿಜಾಮ , ಒಕ್ಕೂಟಕ್ಕೆ ಸೇರಲು ಒಪ್ಪದೆ ಸ್ವತಂತ್ರ ಆಡಳಿತ ನಡೆಸುವುದಾಗಿ ಘೋಷಿಸಿಕೊಂಡಿದ್ದರು. ಇದರಿಂದಾಗಿ ಹೈದರಾಬಾದ್ ಕರ್ನಾಟಕದ ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳು ಸ್ವತಂತ್ರವಾಗಲಿಲ್ಲ. ನಿಜಾಮರ ನಿರ್ಧಾರ ಹೈದರಾಬಾದ್ ಪ್ರಾಂತ್ಯದ ಜನರನ್ನು ರೊಚ್ಚಿಗೆಬ್ಬಿಸಿತು. ಭಾರತ ಒಕ್ಕೂಟಕ್ಕೆ ಸೇರಿಸಲು ಈ ಭಾಗದಲ್ಲಿ ಮತ್ತೊಂದು ಸ್ವಾತಂತ್ರ್ಯದ ಚಳುವಳಿ ನಡೆಯಿತು. ಅಲ್ಲಿಯೂ ಸಾಕಷ್ಟು ಜೀವಗಳು ಬಲಿಯಾದವು.

ಈ ಭಾಗದ ಬಹುತೇಕರು ಭಾರತದ ಒಕ್ಕೂಟ ಸೇರುವ ಬಯಕೆ ಹೊಂದಿದ್ದರು. ಹೋರಾಟ ಕೂಡಾ ನಡೆಸಿದ್ದರು. ಅವರ ಕೂಗು ಹತ್ತಿಕ್ಕಲು, ಹೋರಾಟ ಬಗ್ಗು ಬಡಿಯಲು ನಿಜಾಮ ತನ್ನ ಖಾಸಗಿ ಸೈನ್ಯ ರಜಾಕಾರಪಡೆ ಸಜ್ಜುಗೊಳಿಸಿದನು. ವಿಮೋಚನಾ ಹೋರಾಟ ಹತ್ತಿಕ್ಕಲು ತನ್ನ ಬಲಗೈ ಬಂಟ ಖಾಸಿಂ ರಜ್ವಿಗೆ ನಿಜಾಮ ಸಂಪೂರ್ಣ ಸ್ವತಂತ್ರ ನೀಡಿದ. 1947 ಜುಲೈ ತಿಂಗಳಲ್ಲಿ ನಿಜಾಮ, ಹೋರಾಟ ನಿರತರ ಬಂಧನಕ್ಕೆ ಆದೇಶ ಹೊರಡಿಸಿದ. ಸ್ವಾತಂತ್ರ್ಯ ಸೇನಾನಿಗಳನ್ನು ಬಂಧಿಸಿ ನಿಜಾಮನ ಸಾರ್ವಭೌಮತ್ವ ಸಂರಕ್ಷಿಸುವ ಜವಾಬ್ದಾರಿ ಹೊತ್ತ ರಜಾಕಾರರು ಸಾವಿರಾರು ಹೋರಾಟಗಾರರನ್ನು ಬಂಧಿಸಿ ಜೈಲಿಗೆ ಈಹಾಕಿದರು. ಜೈಲುಗಳು ತುಂಬಿ ಹೋದವು.




ನಿಜಾಮನ ಈ ನಿರ್ಧಾರ ಸ್ಥಳೀಯರ ಕೆಂಗಣ್ಣಿಗೆ ಗುರಿಯಾಯ್ತು. ಆಗ ಸಮಾರೋಪಾದಿಯಲ್ಲಿ ಜನರು ವಿಮೋಚನಾ ಚಳುವಳಿಗೆ ಧುಮುಕಿದರು.

ನಿಜಾಮರ ಆಡಳಿತದಿಂದ ಮುಕ್ತಿಗಾಗಿ ಈ ಭಾಗದ ಜನರು ಹಲವು ರೀತಿಯ ಹೋರಾಟಗಳನ್ನು ನಡೆಸಿದರು.

ರೈತರು, ವಿದ್ಯಾರ್ಥಿಗಳು, ಯುವಕರು, ಮಹಿಳೆಯರು ಸೇರಿದಂತೆ ಸಮಾಜದ ವಿವಿಧ ವರ್ಗದ ಜನರು ಸ್ವಾತಂತ್ರ್ಯ ಮತ್ತು ಪ್ರಜಾಪ್ರಭುತ್ವದ ಆಶಯಕ್ಕಾಗಿ ಧ್ವನಿ ಎತ್ತಿದರು. ಅನೇಕ ಹೋರಾಟಗಾರರು ತಮ್ಮ ಬದುಕು, ಆಸ್ತಿ ಮತ್ತು ಭದ್ರತೆಯನ್ನು ಲೆಕ್ಕಿಸದೆ ಹೋರಾಟದಲ್ಲಿ ಭಾಗವಹಿಸಿದರು.

ಹೈದರಾಬಾದ್ ವಿಮೋಚನಾ ಹೋರಾಟದಲ್ಲಿ ಪ್ರಮುಖ ಘಟ್ಟವಾಗಿರೋದು 1948 ಮೇ 9ರಂದು ಬೀದರ್ ಜಿಲ್ಲೆಯ ಗೋರ್ಟಾ ಗ್ರಾಮದಲ್ಲಿ ನಡೆದ ಸ್ವಾತಂತ್ರ್ಯ ಸೇನಾನಿಗಳ ಹತ್ಯಾಕಾಂಡ. ಭಾರತ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕ ಸಂದರ್ಭದಲ್ಲಿ ಬಾವುರಾವ ಪಾಟೀಲ ಹಾಗೂ ವಿಠೋಬಾ ನಿರೋಡೆ, ಗೋರ್ಟಾ ಗ್ರಾಮದಲ್ಲಿ ರಾಷ್ಟ್ರದ ತ್ರಿವರ್ಣ ಧ್ವಜ ಹಾರಿಸಿದ್ದರು. ಈ ವೇಳೆ ರಜಾಕಾರರ ಸಹವರ್ತಿ ಆ ಧ್ವಜ ಇಳಿಸಿದ್ದಲ್ಲದೇ ಬಾವುರಾವ ಪಾಟೀಲರಿಗೆ ಅವಮಾನ ಮಾಡಿದ್ದರು. ಅಲ್ಲದೆ ಪಾಟೀಲರ ಮನೆ ಲೂಟಿ ಮಾಡಿದರು. ಅವಮಾನ, ಮನೆ ಲೂಟಿಯಿಂದ ಆಕ್ರೋಶಗೊಂಡ ಬಾವುರಾವ ಪಾಟೀಲ, ರಜಾಕಾರರ ಸಹವರ್ತಿ ಇಸಾಮುದ್ದೀನನ್ನು ಕೊಂದು ಹಾಕಿದ್ದರು. ಇಸಾಮುದ್ದೀನ್ ಕೊಲೆ ರಜಾಕಾರರನ್ನು ಕೆರಳಿಸಿತು.

ಗೋರ್ಟಾ ಗ್ರಾಮದ ಮಹಾದೇವಪ್ಪ ಡುಮಣಿ ಎಂಬ ಸಾಹುಕಾರರ ಮನೆ ಅಬೇಧ್ಯ ಕೋಟೆಯಾಗಿತ್ತು. ಹೀಗಾಗಿ, ಅಲ್ಲಿ ನೂರಾರು ಜನ ಸ್ವಾತಂತ್ರ್ಯ ಸೇನಾನಿಗಳು ಆಶ್ರಯ ಪಡೆಯುತ್ತಿದ್ದರು. ರಜಾಕರು ದಾಳಿ ವೇಳೆ ಅಲ್ಲಿ 800ಕ್ಕೂ ಹೆಚ್ಚು ಜನರು ಸೇನಾನಿಗಳು ಇದ್ದರು ಎನ್ನಲಾಗಿದೆ. ಇಸಾಮುದ್ದೀನ್ನ ಕೊಲೆ ಸೇಡನ್ನು ತೀರಿಸಿಕೊಳ್ಳಲು ಆತನ ಅಣ್ಣ ಚಾಂದ ಪಟೇಲ್ ರಜಾಕಾರರ ಪಡೆಯ ನೇತೃತ್ವ ವಹಿಸಿ ಗೋರ್ಟಾ ಗ್ರಾಮ ಗುರಿಯಾಗಿಸಿಕೊಂಡು ದಾಳಿ ಮಾಡಿ ಎಲ್ಲರನ್ನು ಹತ್ಯೆಗೈದ ಎಂಬ ಕರಾಳ ಇತಿಹಾಸವಿದೆ.

ಭಾರತ ಏಕೀಕರಣದ ರೂವಾರಿ ಉಕ್ಕಿನ ಮನುಷ್ಯ ಸರ್ದಾರ ವಲ್ಲಭಭಾಯಿ ಪಟೇಲ್ ಅವರ ಪ್ರವೇಶ:

ಗೋರ್ಟಾ ಗ್ರಾಮದಲ್ಲಿ ನಡೆದ ಹತ್ಯಾಕಾಂಡದಿಂದ ಸಹನೆ ಕಳೆದುಕೊಂಡ ಸೇನಾನಿಗಳು ಪ್ರತಿಕಾರವಾಗಿ ಹಲವು ರಜಾಕಾರರನ್ನು ಕೊಂದು ಹಾಕಿದರು. ಇದರಿಂದ ರೊಚ್ಚಿಗೆದ್ದ,ರಜ್ವಿ ರಕ್ತದೋಕುಳಿಯೇ ಹರಿಸಿಬಿಟ್ಟ, ಎಲ್ಲಡೆ ಕೊಲೆ, ಸುಲಿಗೆ, ಅತ್ಯಾಚಾರಗಳು ಹೆಚ್ಚಾದವು. ಆಗ ಹೋರಾಟಗಾರರು ಅಂದಿನ ಗೃಹ ಮಂತ್ರಿ, ಭಾರತ ಏಕೀಕರಣದ ರೂವಾರಿ ಉಕ್ಕಿನ ಮನುಷ್ಯ ಸರದಾರ ವಲ್ಲಭಭಾಯಿ ಪಟೇಲ್ ಅವರನ್ನು ಭೇಟಿಯಾದರು. ಪಟೇಲ್ ಅವರು ಈ ಹಾವಳಿಯನ್ನು ನಿಲ್ಲಿಸಲು ಯೋಜನೆಯನ್ನು ಹಾಕಿದರು. ಇವರನ್ನು ಸದೆಬಡೆಯಲು ಮಿಲಿಟರಿ ಪಡೆ ಕಾರ್ಯಾಚರಣೆಗಿಳಿಸಲು ಚಿಂತಿಸಿದ್ದರು

ಪಟೇಲರು ಪೊಲೀಸ್ ಕಾರ್ಯಾಚರಣೆ ನಡೆಸುವ ಮೂಲಕ ನಿಜಾಮನ ಹೆಡೆಮುರಿ ಕಟ್ಟುವಲ್ಲಿ ಯಶಸ್ವಿಯಾದರು. ತಾನಾಗಿಯೇ ತನ್ನ ಸೋಲು ಒಪ್ಪಿಕೊಂಡ ನಿಜಾಮ ಸೆ.17, 1948ರಲ್ಲಿ ಭಾರತ ಒಕ್ಕೂಟಕ್ಕೆ ಹೈದ್ರಾಬಾದ್ ರಾಜ್ಯವನ್ನು ಒಪ್ಪಿಸಿದ. ಅಂದು ಸಹಸ್ರಾರು ಜನರ ಹೋರಾಟದ ಪರಿಣಾಮ ಇಂದು ಹೈದರಾಬಾದ್ ಕರ್ನಾಟಕ ಪ್ರಾಂತ್ಯಕ್ಕೆ ವಿಮೋಚನೆ ದೊರೆತಿದೆ.

ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ ಸ್ವಾತಂತ್ರ್ಯ ಸಿಕ್ಕು ಏಳು ದಶಕಗಳು ಗತಿಸುತ್ತಿವೆ. ಆದರೆ ಗುರುತರ ಬದಲಾವಣೆ ಕಾಣುತ್ತಿಲ್ಲ ಅನ್ನೋದು ಈ ಭಾಗದ ಜನರ ಅಸಮಧಾನ. ಹೈದರಾಬಾದ್ ಕರ್ನಾಟಕ ಅಸಮತೋಲನ ಸರಿದೂಗಿಸಲು ನೂರಾರು ಜನರ ಹೋರಾಟದ ಫಲವಾಗಿ ಈಗ 371(ಜೆ) ಕಲಂ ಜಾರಿಯಾಗಿದೆ. ಮತ್ತು ಹೈದರಾಬಾದ್ ಕರ್ನಾಟಕಕ್ಕೆ ಕಲ್ಯಾಣ ಕರ್ನಾಟಕವೆಂದು ನಾಮಕರಣ ಮಾಡಲಾಗಿದೆ.

ಸದ್ಯ ಕಲ್ಯಾಣ ಕರ್ನಾಟಕವೆಂದು ಹೆಸರು ಬದಲಾಗಿರುವುದು ಹೊರತುಪಡಿಸಿದರೆ, ಅಭಿವೃದ್ಧಿಯಲ್ಲಿ ಮಾತ್ರ ಕಲ್ಯಾಣ ಆಗುತ್ತಿಲ್ಲ ಎಂಬ ಜನರ ಆರೋಪ ಮುಂದುವರೆದಿದೆ.

ಸಾವಿರಾರು ಮಹಾತ್ಮರ ತ್ಯಾಗ ಮತ್ತು ಹೋರಾಟದ ಫಲವಾಗಿ 1948ರ ಸೆಪ್ಟೆಂಬರ್ 17ರಂದು ಹೈದರಾಬಾದ್ ಸಂಸ್ಥಾನವು ಭಾರತೀಯ ಒಕ್ಕೂಟಕ್ಕೆ ಸೇರ್ಪಡೆಯಾಯಿತು.

ಆದ್ದರಿಂದ ಸೆಪ್ಟೆಂಬರ್ 17 ಕೇವಲ ಒಂದು ದಿನಾಂಕವಲ್ಲ; ಅದು ಸ್ವಾತಂತ್ರ್ಯ, ಸ್ವಾಭಿಮಾನ, ಪ್ರಜಾಪ್ರಭುತ್ವ ಮತ್ತು ರಾಷ್ಟ್ರೀಯ ಏಕತೆಯ ಸಂಕೇತ. ಈ ದಿನವನ್ನು ಆಚರಿಸುವಾಗ ನಮ್ಮ ಹಿರಿಯ ಹೋರಾಟಗಾರರ ತ್ಯಾಗವನ್ನು ಸ್ಮರಿಸುವುದರ ಜೊತೆಗೆ, ಅವರು ಕನಸು ಕಂಡ ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಅಭಿವೃದ್ಧಿಯ ಸಮಾಜ ನಿರ್ಮಾಣದ ಸಂಕಲ್ಪವನ್ನು ಮಾಡಬೇಕಾಗಿದೆ.

ಕಲ್ಯಾಣ ಕರ್ನಾಟಕ ಇಂದು ಶಿಕ್ಷಣ, ಉದ್ಯೋಗ, ಆರೋಗ್ಯ, ಕೃಷಿ ಮತ್ತು ಮೂಲಸೌಕರ್ಯ ಕ್ಷೇತ್ರಗಳಲ್ಲಿ ಇನ್ನಷ್ಟು ಪ್ರಗತಿ ಸಾಧಿಸುವ ಅಗತ್ಯವಿದೆ. ಇತಿಹಾಸವನ್ನು ಕೇವಲ ನೆನಪಿಸಿಕೊಳ್ಳುವುದಲ್ಲ, ಅದರ ಪಾಠಗಳನ್ನು ವರ್ತಮಾನದಲ್ಲಿ ಅಳವಡಿಸಿಕೊಳ್ಳುವುದೇ ನಿಜವಾದ ಗೌರವ.

ತುಂಗ ಬಿಂಬ
-ಡಾ.ವಸುಂದರಾ ಪಾಟೀಲ
ಉಪನ್ಯಾಸಕರು ಕಾನೂನು ಮಹಾವಿದ್ಯಾಲಯ ರಾಯಚೂರು



# 41ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನ: ಸಂಪಾದಕರೊಂದಿಗೆ ಪೂರ್ವಭಾವಿ ಸಭೆ



ರಾಯಚೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ರಾಯಚೂರಿನಲ್ಲಿ ನಡೆಯಲಿರುವ 41ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನದ ಪೂರ್ವಸಿದ್ಧತೆ ಕುರಿತು ಜಿಲ್ಲೆಯ ವಿವಿಧ ಪತ್ರಿಕೆಗಳ ಸಂಪಾದಕರೊಂದಿಗೆ ಮಹತ್ವದ ಸಭೆ ನಡೆಸಲಾಯಿತು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸಭೆಯಲ್ಲಿ ಜಿಲ್ಲೆಯ ಹಿರಿಯ ಹಾಗೂ ಕಿರಿಯ ಪತ್ರಿಕೆಗಳ ಸಂಪಾದಕರು ಭಾಗವಹಿಸಿ, ಸಮ್ಮೇಳನದ ಯಶಸ್ವಿ ಆಯೋಜನೆಗೆ ಕೈಗೊಳ್ಳಬೇಕಾದ ಸಿದ್ಧತೆಗಳು, ಸಮಿತಿಗಳ ರಚನೆ, ಜವಾಬ್ದಾರಿಗಳ ಹಂಚಿಕೆ, ವಸತಿ ಮತ್ತು ಊಟದ ವ್ಯವಸ್ಥೆ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್. ಗುರುನಾಥ ಮಾತನಾಡಿ, 41ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನವನ್ನು ರಾಯಚೂರಿನಲ್ಲಿ ಆಯೋಜಿಸುತ್ತಿರುವುದು ಜಿಲ್ಲೆಯ ಪತ್ರಿಕಾ ಸಮುದಾಯಕ್ಕೆ ಮಹತ್ವದ ಸಂಗತಿಯಾಗಿದೆ. ಸಮ್ಮೇಳನದ ಪೂರ್ವಸಿದ್ಧತೆಗಳು ಈಗಾಗಲೇ ಆರಂಭವಾಗಿದ್ದು, ಜಿಲ್ಲೆಯ ಜನಪ್ರತಿನಿಧಿಗಳನ್ನು ಭೇಟಿ ಮಾಡಿ ಸಹಕಾರ ಕೋರಿ ಮೊದಲ ಹಂತದ ಮಾತುಕತೆ ನಡೆಸಲಾಗಿದೆ ಎಂದರು.

ರಾಜ್ಯದ ವಿವಿಧ ಭಾಗಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಪತ್ರಕರ್ತರು ಸಮ್ಮೇಳನಕ್ಕೆ ಆಗಮಿಸಲಿರುವುದರಿಂದ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಲು ಜಿಲ್ಲೆಯ ಎಲ್ಲ ಪತ್ರಕರ್ತರು ಹಾಗೂ ಪತ್ರಿಕೆಗಳ ಸಂಪಾದಕರ ಸಹಕಾರ ಅತ್ಯಗತ್ಯವಾಗಿದೆ. ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವ ಮೂಲಕ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಅಭಿಪ್ರಾಯ ವ್ಯಕ್ತಪಡಿಸಿದ ವಿವಿಧ ಪತ್ರಿಕೆಗಳ ಸಂಪಾದಕರು, ರಾಜ್ಯಮಟ್ಟದ ಸಮ್ಮೇಳನ ದೊಡ್ಡ ಪ್ರಮಾಣದ ಕಾರ್ಯಕ್ರಮವಾಗಿರುವುದರಿಂದ ಪೂರ್ವಸಿದ್ಧತೆಯನ್ನು ಇನ್ನಷ್ಟು ಚುರುಕುಗೊಳಿಸುವ ಅಗತ್ಯವಿದೆ. ವಿವಿಧ ವಿಭಾಗಗಳಿಗೆ ಪ್ರತ್ಯೇಕ ಸಮಿತಿಗಳನ್ನು ರಚಿಸಿ, ಹಿರಿಯ ಹಾಗೂ ಅನುಭವಿ ಪತ್ರಕರ್ತರನ್ನು ಒಳಗೊಂಡಂತೆ ಜವಾಬ್ದಾರಿಗಳನ್ನು ಹಂಚಿಕೆ ಮಾಡಬೇಕು ಎಂದು ಸಲಹೆ ನೀಡಿದರು.

ಸಮ್ಮೇಳನಕ್ಕೆ ಅಗತ್ಯವಿರುವ ಆರ್ಥಿಕ ಸಂಪನ್ಮೂಲ ಕ್ರೋಢೀಕರಣಕ್ಕೂ ಆದ್ಯತೆ ನೀಡಬೇಕು. ಹೊರ ಜಿಲ್ಲೆಗಳಿಂದ ಆಗಮಿಸುವ ಪತ್ರಕರ್ತರಿಗೆ ಸಮರ್ಪಕ ವಸತಿ, ಊಟ, ಸಾರಿಗೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕು. ಸಮ್ಮೇಳನಕ್ಕೆ ಇನ್ನೂ ಸುಮಾರು ಎರಡು ತಿಂಗಳು ಮಾತ್ರ ಬಾಕಿ ಇರುವ ಹಿನ್ನೆಲೆಯಲ್ಲಿ ಸಿದ್ಧತಾ ಕಾರ್ಯಗಳಿಗೆ ವೇಗ ನೀಡಬೇಕು ಎಂದು ಅಭಿಪ್ರಾಯಪಟ್ಟರು.

ಸಮ್ಮೇಳನ ಸಮಿತಿ ಹಾಗೂ ಸ್ವಾಗತ ಸಮಿತಿಗಳನ್ನು ಶೀಘ್ರದಲ್ಲಿ ರಚಿಸಿ, ಜಿಲ್ಲೆಯ ಹಿರಿಯ ಪತ್ರಕರ್ತರು, ಸಂಪಾದಕರು ಹಾಗೂ ವಿವಿಧ ಮಾಧ್ಯಮ ಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯಯೋಜನೆ ರೂಪಿಸಬೇಕು. ಸಕಾರಾತ್ಮಕ ಚಿಂತನೆ ಮತ್ತು ಪರಸ್ಪರ ಸಹಕಾರದೊಂದಿಗೆ ಎಲ್ಲರನ್ನೂ ಒಗ್ಗೂಡಿಸಿಕೊಂಡು ಸಮ್ಮೇಳನವನ್ನು ಅರ್ಥಪೂರ್ಣವಾಗಿ ಆಯೋಜಿಸಬೇಕು ಎಂದು ಸಭೆಯಲ್ಲಿ ಸಲಹೆಗಳು ವ್ಯಕ್ತವಾದವು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ, ರಾಜ್ಯ ಸಮಿತಿ ಸದಸ್ಯರಾದ ಬಸವರಾಜ ನಾಗಡದಿನ್ನಿ, ಅರವಿಂದ್ ಕುಲಕರ್ಣಿ, ಕಾರ್ಯಕಾರಿ ಸಮಿತಿ ಸದಸ್ಯ ಮಹಾನಂದ ನಾಯಕ್, ಲಕ್ಷ್ಮಣ ಕಪಗಲ್, ಪ್ರಸನ್ನಕುಮಾರ ಜೈನ್, ನೀಲಕಂಠ ಸ್ವಾಮಿ, ವಿವಿಧ ಪತ್ರಿಕೆಗಳ ಸಂಪಾದಕರಾದ ಅಂಬಣ್ಣ ಅರೋಲಿ, ಡಿ.ಎಚ್. ಕಂಬಳಿ, ಎಂ. ವೀರಭದ್ರಪ್ಪ, ವೀರಾರೆಡ್ಡಿ, ಶಿವರಾಜ್, ಶಿವಮೂರ್ತಿ ಹಿರೇಮಠ, ಚನ್ನಬಸವ ಬಾಗಲವಾಡ, ಲಿಂಗರಾಜ್, ತಾಯಪ್ಪ ಹೊಸೂರ್, ಅಣ್ಣಪ್ಪ ಮೇಟಿ ಗೌಡ, ಗುರುರಾಜ ಕೆ., ಶ್ರೀನಿವಾಸ್, ರಘುವೀರ್ ನಾಯಕ್, ಬಸನಗೌಡ, ಆನಂದ್ ವಿ.ಕೆ., ಈರಪ್ಪ, ರವಿ ದಾದಾಸ್, ಶಂಕರ್ ಹನುಮಂತ್ ನಾಯಕ್, ಖಾಜಾ ಹುಸೇನ್, ಬಾಬಾ ಹಟ್ಟಿ, ಶಾಮಸುಂದರ್, ಲಕ್ಷ್ಮಣ್ ಬಾರಿಕೆರ್ ಸೇರಿದಂತೆ ಇತರರು ಪಾಲ್ಗೊಂಡಿದ್ದರು.

# ಗಣೇಶೋತ್ಸವ ಅಂಗವಾಗಿ ವೀರ ಸಾವರ್ಕರ್ ಯೂತ್ ಅಸೋಸಿಯೇಷನ್‌ನಿಂದ ರಕ್ತದಾನ ಶಿಬಿರ



ರಾಯಚೂರು: ಗಣೇಶ ಹಬ್ಬದ ಪ್ರಯುಕ್ತ ವೀರ ಸಾವರ್ಕರ್ ಯೂತ್ ಅಸೋಸಿಯೇಷನ್ ರಾಯಚೂರು ವತಿಯಿಂದ ಬುಧವಾರ ನಗರದಲ್ಲಿ ಬೃಹತ್ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಶಿಬಿರದಲ್ಲಿ ರಾಯಚೂರು ನಗರ ಶಾಸಕ ಶಿವರಾಜ್ ಪಾಟೀಲ್, ಬಿಜೆಪಿ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ರವೀಂದ್ರ ಜಲ್ದಾರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಶಿವರಾಜ್ ಪಾಟೀಲ್, ರಕ್ತದಾನವು ಮತ್ತೊಬ್ಬರ ಜೀವ ಉಳಿಸುವ ಮಹತ್ತರ ಮಾನವೀಯ ಸೇವೆಯಾಗಿದ್ದು, ಯುವಕರು ಹಾಗೂ ಸಾರ್ವಜನಿಕರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡುವ ಮೂಲಕ ಸಮಾಜಮುಖಿ ಕಾರ್ಯಗಳಲ್ಲಿ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಗಣೇಶೋತ್ಸವವನ್ನು ಭಕ್ತಿ, ಶಾಂತಿ, ಸೌಹಾರ್ದತೆ ಹಾಗೂ ಸಾಮಾಜಿಕ ಕಳಕಳಿಯೊಂದಿಗೆ ಆಚರಿಸುವುದು ಮಹತ್ವದ್ದಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ವೀರ ಸಾವರ್ಕರ್ ಯೂತ್ ಅಸೋಸಿಯೇಷನ್ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ದೇಶದ ಕಟ್ಟಕಡೆಯ ವ್ಯಕ್ತಿಗೂ ಸಾಮಾಜಿಕ ನ್ಯಾಯ ದೊರೆಯಬೇಕು: ಹಾಜಿ ಚೌದ್ರಿ




ಸಿರವಾರ: ದೇಶದ ಕಟ್ಟಕಡೆಯ ವ್ಯಕ್ತಿಗೂ ಸಮಾನ ಅವಕಾಶ ಹಾಗೂ ಸಾಮಾಜಿಕ ನ್ಯಾಯ ದೊರೆಯಬೇಕು. ಯುವಜನತೆ ಸಂವಿಧಾನದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಪ್ರಜಾಪ್ರಭುತ್ವದ ಅಡಿಪಾಯವನ್ನು ಮತ್ತಷ್ಟು ಬಲಪಡಿಸಬೇಕು ಎಂದು ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಜಿ ಚೌದ್ರಿ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾನತೆ, ನ್ಯಾಯ ಮತ್ತು ಸ್ವಾತಂತ್ರ್ಯದ ಆಶಯಗಳೊಂದಿಗೆ ದೇಶದ ಪ್ರತಿಯೊಬ್ಬ ನಾಗರಿಕನಿಗೂ ಅವಕಾಶ ಕಲ್ಪಿಸುವ ಶಕ್ತಿಶಾಲಿ ವ್ಯವಸ್ಥೆಯನ್ನು ಸಂವಿಧಾನ ಒದಗಿಸಿದೆ. ಯುವಕರು ಸಂವಿಧಾನದ ಆಶಯಗಳನ್ನು ಅರಿತು, ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಪಾಲಿಸುವ ಮೂಲಕ ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಹನುಮಂತ ಕೊರಾಪುರ ಮಾತನಾಡಿ, ವಿದ್ಯಾರ್ಥಿಗಳು ಸಂವಿಧಾನ ನೀಡಿರುವ ಮೂಲಭೂತ ಹಕ್ಕುಗಳ ಜೊತೆಗೆ ತಮ್ಮ ಕರ್ತವ್ಯಗಳನ್ನೂ ಅರಿತು ಪಾಲಿಸಬೇಕು ಎಂದರು.

ಶಿಕ್ಷಣವು ಪ್ರಜಾಸತ್ತಾತ್ಮಕ ಚಿಂತನೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಪ್ರಮುಖ ಸಾಧನವಾಗಿದೆ. ನೈತಿಕ ಮೌಲ್ಯ, ಜಾಗೃತಿ ಹಾಗೂ ಕರ್ತವ್ಯ ಪ್ರಜ್ಞೆ ಹೊಂದಿರುವ ನಾಗರಿಕರಿಂದ ಮಾತ್ರ ಪ್ರಜಾಪ್ರಭುತ್ವ ಮತ್ತಷ್ಟು ಸದೃಢವಾಗಲು ಸಾಧ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾಟಾಚಾರಕ್ಕೆ ಸೀಮಿತ: ಮಲ್ಲೇಶಪ್ಪ ಹುನುಗುಂದಬಾಡಾ ಆರೋಪ



ದೇವದುರ್ಗ, ಸೆ.16: ತಾಲೂಕು ಆಡಳಿತ, ಸಮಾಜ ಕಲ್ಯಾಣ ಇಲಾಖೆ, ಪುರಸಭೆ ಹಾಗೂ ಶಿಕ್ಷಣ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಹಾಗೂ ನಿಯಮಾನುಸಾರ ಆಚರಿಸದೆ, ತರಾತುರಿಯಲ್ಲಿ ಕಾಟಾಚಾರದ ಕಾರ್ಯಕ್ರಮವಾಗಿ ನಡೆಸಲಾಗಿದೆ ಎಂದು ಪ್ರಗತಿಪರ ಸಂಘಟನೆಗಳ ಮುಖಂಡ ಮಲ್ಲೇಶಪ್ಪ ಹುನುಗುಂದಬಾಡಾ ಆರೋಪಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ಮೌಲ್ಯಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ. ಆದರೆ ತಾಲೂಕು ಆಡಳಿತ ಪ್ರಗತಿಪರ ಸಂಘಟನೆಗಳ ಮುಖಂಡರನ್ನು ಆಹ್ವಾನಿಸದೆ, ಕೇವಲ ಇಲಾಖಾ ಕಾರ್ಯಕ್ರಮದಂತೆ ಆಚರಿಸಿದೆ ಎಂದು ದೂರಿದರು.

ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳಿಂದ ಭಾರತ ಜಾಗತಿಕವಾಗಿ ಗುರುತಿಸಿಕೊಂಡಿದೆ. ಸಂವಿಧಾನದ ಆಶಯಗಳ ಅಡಿಯಲ್ಲಿ ಕಾರ್ಯನಿರ್ವಹಿಸಬೇಕಾದ ಅಧಿಕಾರಿಗಳಿಂದಲೇ ಇಂತಹ ನಿರ್ಲಕ್ಷ್ಯ ನಡೆಯುವುದು ಸರಿಯಲ್ಲ. ಕಾರ್ಯಕ್ರಮದ ವೇದಿಕೆಯಲ್ಲಿ ಸಂವಿಧಾನದ ಪೀಠಿಕೆಯ ಪ್ರದರ್ಶನಕ್ಕೆ ಸೂಕ್ತ ವ್ಯವಸ್ಥೆ ಮಾಡದೆ, ಕೇವಲ ಝೆರಾಕ್ಸ್ ಪ್ರತಿಗಳನ್ನು ವಿತರಿಸಲಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ವೇದಿಕೆಯ ಗಣ್ಯರಿಗೆ ಸನ್ಮಾನ ಮಾಡಿದ ಬಳಿಕ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಗೌರವ ಸಲ್ಲಿಸಿರುವ ಕ್ರಮವೂ ಶಿಷ್ಟಾಚಾರಕ್ಕೆ ತಕ್ಕಂತಿರಲಿಲ್ಲ ಎಂದು ಆರೋಪಿಸಿದ ಅವರು, ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಕ್ಷಮೆಯಾಚಿಸಬೇಕು ಹಾಗೂ ಮುಂದಿನ ದಿನಗಳಲ್ಲಿ ಇಂತಹ ಲೋಪಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು ಎಂದು ಒತ್ತಾಯಿಸಿದರು.

ವಕೀಲ ವೆಂಕನಗೌಡ ಮಾತನಾಡಿ, ಸಂವಿಧಾನವು ಧರ್ಮನಿರಪೇಕ್ಷತೆಯ ತತ್ವವನ್ನು ಪ್ರತಿಪಾದಿಸಿ, ಎಲ್ಲ ಧರ್ಮಗಳ ಆಚರಣೆಗೆ ಸಮಾನ ಅವಕಾಶ ನೀಡಿದೆ. ಆದರೆ ಸರ್ಕಾರಿ ಕಚೇರಿ ಹಾಗೂ ಕಟ್ಟಡಗಳಲ್ಲಿ ಧಾರ್ಮಿಕ ಆಚರಣೆ ನಡೆಸುವುದು ಸೂಕ್ತವಲ್ಲ ಎಂದು ಅಭಿಪ್ರಾಯಪಟ್ಟರು.

ತಹಸೀಲ್ದಾರ್ ನಾಗಮ್ಮ ಎಂ. ಕಟ್ಟಿಮನಿ ಅವರು ಮಿನಿ ವಿಧಾನಸೌಧದಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಿ ಪೂಜೆ ನಡೆಸಿದ್ದಾರೆ ಎಂದು ಆರೋಪಿಸಿದ ಅವರು, ತಾಲೂಕು ದಂಡಾಧಿಕಾರಿಗಳೇ ಇಂತಹ ನಡೆ ಅನುಸರಿಸಿದರೆ ಇತರೆ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಯಾವ ಸಂದೇಶ ಹೋಗುತ್ತದೆ ಎಂದು ಪ್ರಶ್ನಿಸಿದರು. ಪೊಲೀಸ್ ವಸತಿ ಗೃಹ, ಬಸ್ ಡಿಪೋ ಸೇರಿದಂತೆ ಇನ್ನೂ ಕೆಲವು ಸರ್ಕಾರಿ ಇಲಾಖೆಗಳಲ್ಲಿ ಇದೇ ರೀತಿಯ ಧಾರ್ಮಿಕ ಆಚರಣೆ ನಡೆದಿರುವ ಮಾಹಿತಿ ಇದೆ ಎಂದರು.

ಮುಂದಿನ ದಿನಗಳಲ್ಲಿ ಸರ್ಕಾರಿ ಕಚೇರಿಗಳಲ್ಲಿ ಸಂವಿಧಾನದ ಧರ್ಮನಿರಪೇಕ್ಷ ಮೌಲ್ಯಗಳಿಗೆ ವಿರುದ್ಧವಾಗುವಂತಹ ಆಚರಣೆಗಳಿಗೆ ಕಡಿವಾಣ ಹಾಕಬೇಕು ಎಂದು ವೆಂಕನಗೌಡ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಮಹಾಂತೇಶ ಭಾವಿಮನಿ, ಮಲ್ಲಿಕಾರ್ಜುನ ಕೊತ್ತದೊಡ್ಡಿ, ಶಿವಪುತ್ರಪ್ಪ ದೊಡ್ಡಮನಿ ಹಾಗೂ ಮೈನುದ್ದೀನ್ ಉಪಸ್ಥಿತರಿದ್ದರು.

# ವಿಶ್ವಕರ್ಮ ಜಯಂತಿ ಇಂದು ಅದ್ದೂರಿ ಆಚರಣೆ: ಉದಯಕುಮಾರ ಮಸ್ಕಿ



ರಾಯಚೂರು, ಸೆ.16: ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜದ ವತಿಯಿಂದ ಭಗವಾನ್ ಶ್ರೀ ವಿಶ್ವಕರ್ಮ ಜಯಂತಿಯನ್ನು ಇಂದು ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಸಮಾಜದ ಜಿಲ್ಲಾಧ್ಯಕ್ಷ ಉದಯಕುಮಾರ ಪತ್ತಾರ್ ಮಸ್ಕಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಯಂತಿ ಅಂಗವಾಗಿ ನಗರದ ರೇಡಿಯೋ ಸ್ಟೇಷನ್ ಸಮೀಪದ ವಿಶ್ವಕರ್ಮ ವೃತ್ತದಿಂದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಬೆಳಿಗ್ಗೆ 10 ಗಂಟೆಗೆ ಭವ್ಯ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ಮೆರವಣಿಗೆಯಲ್ಲಿ ಸಮಾಜದ ಮುಖಂಡರು, ಪದಾಧಿಕಾರಿಗಳು ಹಾಗೂ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದರು.

ಕಾರ್ಯಕ್ರಮದ ಭಾಗವಾಗಿ ವಿಶೇಷ ಪೂಜೆ, ಧಾರ್ಮಿಕ ವಿಧಿವಿಧಾನಗಳು, ಸಮಾಜ ಬಾಂಧವರ ಸಮಾವೇಶ ಹಾಗೂ ಉಪನ್ಯಾಸ ಏರ್ಪಡಿಸಲಾಗಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮಾಜದ ಗಣ್ಯರು, ಪ್ರತಿಭಾವಂತ ವಿದ್ಯಾರ್ಥಿಗಳು ಹಾಗೂ ವೃತ್ತಿಪರ ಸಾಧಕರನ್ನು ಇದೇ ಸಂದರ್ಭದಲ್ಲಿ ಗೌರವಿಸಿ ಸನ್ಮಾನಿಸಲಾಗುವುದು ಎಂದು ಹೇಳಿದರು.

ವಿಶ್ವಕರ್ಮ ಸಮುದಾಯದ ಪರಂಪರ ವೃತ್ತಿಗಳಾದ ಬಡಗಿ, ಕಮ್ಮಾರ, ಶಿಲ್ಪಕಲೆ ಸೇರಿದಂತೆ ವಿವಿಧ ಕಸುಬುಗಳಲ್ಲಿ ಸೇವೆ ಸಲ್ಲಿಸುತ್ತಿರುವವರನ್ನು ಗುರುತಿಸಿ ಗೌರವಿಸಲಾಗುವುದು. ವಿದ್ಯಾರ್ಥಿಗಳು ಮತ್ತು ಯುವಕರನ್ನು ಶಿಕ್ಷಣ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಪ್ರೇರೇಪಿಸುವ ಉದ್ದೇಶದಿಂದ ಪ್ರತಿಭಾವಂತರಿಗೂ ಸನ್ಮಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜಯಂತಿ ಕಾರ್ಯಕ್ರಮ ನಡೆಯಲಿದೆ. ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು, ಶಾಸಕರು, ಸ್ಥಳೀಯ ಜನಪ್ರತಿನಿಧಿಗಳು, ವಿವಿಧ ಮಠಾಧೀಶರು, ಸ್ವಾಮೀಜಿಗಳು ಹಾಗೂ ಜಿಲ್ಲೆಯ ವಿವಿಧ ತಾಲೂಕುಗಳಿಂದ ವಿಶ್ವಕರ್ಮ ಸಮಾಜದ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದರು.

ಡಾ. ವಿಶ್ವನಾಥ್ ಎಸ್. ಪತ್ತಾರ್ ಗುಡಿಹಾಳ್ ಉಪನ್ಯಾಸ ನೀಡಲಿದ್ದು, ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಯಂತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಉದಯಕುಮಾರ ಪತ್ತಾರ್ ಮಸ್ಕಿ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಪ್ರಧಾನ ಕಾರ್ಯದರ್ಶಿ ಕೆ. ರಾಮು ಗಾಣಧಾಳ್, ಡಾ. ವೆಂಕಟೇಶ್ ಅನ್ವರಿ, ಎ. ಈಶ್ವರ್, ಡಾ. ಮನೋಹರ್ ಪತ್ತಾರ್ ಸೇರಿದಂತೆ ಸಮಾಜದ ಮುಖಂಡರು, ಪದಾಧಿಕಾರಿಗಳು ಹಾಗೂ ವಿವಿಧ ತಾಲೂಕುಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಸೆ.18ರಂದು ಭಿಕ್ಷಂ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನಾವರಣ



ರಾಯಚೂರು: ರಾಯಚೂರು ಜಿಲ್ಲೆಯ ವಿವಿಧ ಭಾಗಗಳಲ್ಲಿ ಸಂಪೂರ್ಣವಾಗಿ ಚಿತ್ರೀಕರಣಗೊಂಡಿರುವ ಭಿಕ್ಷಂ ಕನ್ನಡ ಚಲನಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನಾವರಣ ಕಾರ್ಯಕ್ರಮವು ಸೆ.18ರಂದು ಸಂಜೆ ನಗರದ ವೀರ ಸಾವರ್ಕರ್ ಗಣೇಶೋತ್ಸವ ವೇದಿಕೆಯಲ್ಲಿ ನಡೆಯಲಿದೆ ಎಂದು ಚಿತ್ರದ ನಟ ಹಾಗೂ ಸಹ ನಿರ್ದೇಶಕ ಅಣ್ಣಪ್ಪ ಮೇಟಿಗೌಡ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಂಶಿ ಎಡೆದೊರೆ ನಿರ್ದೇಶನದಲ್ಲಿ ಹಾಗೂ ತಮ್ಮ ಸಹ ನಿರ್ದೇಶನದಲ್ಲಿ ಚಿತ್ರ ನಿರ್ಮಾಣವಾಗುತ್ತಿದೆ. ತಿರುಪತಿ ಜೋಶಿ ಪ್ರಮುಖ ಪಾತ್ರದಲ್ಲಿ ಅಭಿನಯಿಸಿದ್ದು, ಚಿತ್ರದ ಬಹುತೇಕ ಚಿತ್ರೀಕರಣವನ್ನು ರಾಯಚೂರು ಜಿಲ್ಲೆಯ ವಿವಿಧ ಪ್ರದೇಶಗಳಲ್ಲೇ ನಡೆಸಲಾಗಿದೆ. ಜೊತೆಗೆ ಜಿಲ್ಲೆಯ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಅವಕಾಶ ನೀಡಿರುವುದು ಚಿತ್ರದ ವಿಶೇಷತೆ ಎಂದರು.

ರಾಯಚೂರಿನ ನೆಲ, ಜನಜೀವನ ಹಾಗೂ ಸ್ಥಳೀಯ ಪ್ರತಿಭೆಗಳಿಗೆ ಆದ್ಯತೆ ನೀಡಿರುವ ಕಾರಣ ಚಿತ್ರದ ಮೊದಲ ನೋಟದ ಪೋಸ್ಟರ್ ಅನ್ನು ರಾಯಚೂರಿನಲ್ಲಿಯೇ ಅನಾವರಣಗೊಳಿಸಲು ಚಿತ್ರತಂಡ ನಿರ್ಧರಿಸಿದೆ. ಸೆ.18ರಂದು ಸಂಜೆ ಗಣ್ಯರು ಹಾಗೂ ಸಾರ್ವಜನಿಕರ ಸಮ್ಮುಖದಲ್ಲಿ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆಗೊಳ್ಳಲಿದೆ ಎಂದು ಹೇಳಿದರು.

ಚಿತ್ರದ ಡಿಐ, ಸಿಜಿಐ, 5.1 ಸೌಂಡ್ ಮಿಕ್ಸಿಂಗ್ ಹಾಗೂ ಹಿನ್ನೆಲೆ ಸಂಗೀತಕ್ಕೆ ಸಂಬಂಧಿಸಿದ ತಾಂತ್ರಿಕ ಕಾರ್ಯಗಳು ಬೆಂಗಳೂರು ಮತ್ತು ಚೆನ್ನೈನಲ್ಲಿ ನಡೆಯುತ್ತಿವೆ. ನವೆಂಬರ್ ತಿಂಗಳಲ್ಲಿ ಸುಕ್ಷೇತ್ರ ಮಂತ್ರಾಲಯದ ಶ್ರೀಮಠದಲ್ಲಿ ಚಿತ್ರದ ಟ್ರೈಲರ್ ಬಿಡುಗಡೆ ಮಾಡುವ ಯೋಜನೆಯಿದ್ದು, ವರ್ಷಾಂತ್ಯದೊಳಗೆ ಚಿತ್ರವನ್ನು ತೆರೆಗೆ ತರಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ಅಣ್ಣಪ್ಪ ಮೇಟಿಗೌಡ ತಿಳಿಸಿದರು.

ನಿರ್ದೇಶಕ ವಂಶಿ ಎಡೆದೊರೆ ಮಾತನಾಡಿ, ಸಮಕಾಲೀನ ಸಾಮಾಜಿಕ ವಿಷಯಗಳ ಜೊತೆಗೆ ರಾಯಚೂರು ಜಿಲ್ಲೆಯ ಸೊಗಡು, ಇಲ್ಲಿನ ಜನಜೀವನ ಮತ್ತು ಸ್ಥಳೀಯ ಕಲಾವಿದರ ಪ್ರತಿಭೆಯನ್ನು ಭಿಕ್ಷಂ ಚಿತ್ರದ ಮೂಲಕ ಪ್ರೇಕ್ಷಕರಿಗೆ ಪರಿಚಯಿಸುವ ಪ್ರಯತ್ನ ಮಾಡಲಾಗಿದೆ. ಜಿಲ್ಲೆಯ ಜನರು ಚಿತ್ರಕ್ಕೆ ಪ್ರೋತ್ಸಾಹ ನೀಡಬೇಕು. ಸೆ.18ರಂದು ನಡೆಯುವ ಫಸ್ಟ್ ಲುಕ್ ಪೋಸ್ಟರ್ ಅನಾವರಣ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಚಿತ್ರತಂಡವನ್ನು ಹಾರೈಸಬೇಕು ಎಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ಕಲಾವಿದರಾದ ತಿರುಪತಿ ಜೋಶಿ, ಜಾರ್ಜ್ ಅಬ್ರಹಂ, ನಾರಾಯಣ ರಾವ್ ಹಾಗೂ ಲಕ್ಷ್ಮಣ್ ಗಾರಲದಿನ್ನಿ ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತ ಶಾಲೆಗಳ ಉತ್ತಮ ಶಿಕ್ಷಕರಿಗೆ ಸೆ.19ರಂದು ಜಿಲ್ಲಾ ಮಟ್ಟದ ಪ್ರಶಸ್ತಿ ಪ್ರದಾನ



ರಾಯಚೂರು: ಸಹಾರಾ ಎಜುಕೇಷನ್ ಆ್ಯಂಡ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಜಿಲ್ಲೆಯ ಅಲ್ಪಸಂಖ್ಯಾತ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತ್ಯುತ್ತಮ ಶಿಕ್ಷಕರನ್ನು ಗುರುತಿಸಿ ಗೌರವಿಸುವ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಸೆ.19ರಂದು ನಗರದ ಪಂ. ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಮೊಹಮ್ಮದ್ ಅಬ್ದುಲ್ ಹೈ ಪೀರೋಜ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಲ್-ಕರೀಮ್ ಎಜುಕೇಷನಲ್, ರಿಲೀಜಿಯಸ್ ಆ್ಯಂಡ್ ಚಾರಿಟೇಬಲ್ ವೆಲ್ಫೇರ್ ಟ್ರಸ್ಟ್‌ನ ಗೌರವಾಧ್ಯಕ್ಷ ಹಜರತ್ ಶಾ ಖಾಜಾ ಬಹಾವುದ್ದೀನ್ ಫಾರೂಕ್ ನಕ್ಷಬಂದಿ ಖಾದ್ರಿ ಸಾಹೇಬ್ ಅವರ ಆಧ್ಯಾತ್ಮಿಕ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಜರುಗಲಿದೆ ಎಂದರು.

ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್, ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಎನ್.ಎಸ್. ಬೋಸರಾಜು, ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ವಸಂತ್ ಕುಮಾರ್, ಸಂಸದ ಜಿ. ಕುಮಾರ್ ನಾಯಕ್, ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಸೇರಿದಂತೆ ಜನಪ್ರತಿನಿಧಿಗಳು, ಗಣ್ಯರು ಹಾಗೂ ಹಿರಿಯ ಮುಖಂಡರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯ ವಿವಿಧ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಿಂದ ಆಯ್ಕೆಗೊಂಡ ಶಿಕ್ಷಕರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವುದು. ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರು ತೋರಿರುವ ಬದ್ಧತೆ, ಪರಿಶ್ರಮ ಹಾಗೂ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ನೀಡುತ್ತಿರುವ ಕೊಡುಗೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮೊಹಮ್ಮದ್ ಇಕ್ಬಾಲ್, ಶೈಖ್ ಮಹೆಬೂಬ್, ಸೈಯದ್ ಜುಬೈರ್ ಮೊಹಿಯುದ್ದೀನ್, ಎಂ.ಡಿ. ಫಝುಲ್ಲಾ ಹಾಗೂ ಶೈಬಾಜ್ ಉಪಸ್ಥಿತರಿದ್ದರು.

# ವಾರ್ಡ್‌ಗಳ ಸಮಸ್ಯೆಗಳಿಗೆ ಸ್ಪಂದಿಸದ ಆಡಳಿತದ ವಿರುದ್ಧ ಜೆಡಿಎಸ್ ಆಕ್ರೋಶ



ರಾಯಚೂರು: ನಗರದ ಜನರ ಮೂಲಭೂತ ಸಮಸ್ಯೆಗಳ ಬಗ್ಗೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದು, ಜನರು ನಿತ್ಯ ಸಂಕಷ್ಟ ಎದುರಿಸುತ್ತಿದ್ದರೂ ಪರಿಹಾರಕ್ಕೆ ಮುಂದಾಗುತ್ತಿಲ್ಲ ಎಂದು ಜೆಡಿಎಸ್ ಮುಖಂಡ ರಾಮನಗೌಡ ಏಗನೂರು ಆರೋಪಿಸಿದರು.

ರಾಯಚೂರು ಜಿಲ್ಲಾ ಜೆಡಿಎಸ್ ನೇತೃತ್ವದಲ್ಲಿ ನಗರದ ವಾರ್ಡ್ ನಂ.22ರಲ್ಲಿ ಹಮ್ಮಿಕೊಂಡಿದ್ದ ವಾರ್ಡ್‌ಗಳ ಸಮಸ್ಯೆಗೆ ಪರಿಹಾರ ಯಾವಾಗ? ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಗರ ಶಾಸಕ ಡಾ. ಶಿವರಾಜ ಪಾಟೀಲ್ ಹಾಗೂ ಕಾಂಗ್ರೆಸ್ ಮುಖಂಡ ರವಿ ಬೋಸರಾಜು ವಿರುದ್ಧ ವಾಗ್ದಾಳಿ ನಡೆಸಿದರು.

ನಗರ ಶಾಸಕರಾಗಿ ದೀರ್ಘಕಾಲದಿಂದ ಅಧಿಕಾರದಲ್ಲಿದ್ದರೂ ವಾರ್ಡ್‌ಗಳಿಗೆ ಸಮರ್ಪಕ ಕುಡಿಯುವ ನೀರು, ಚರಂಡಿ ಹಾಗೂ ಸುರಕ್ಷಿತ ಶೌಚಾಲಯದಂತಹ ಕನಿಷ್ಠ ಸೌಲಭ್ಯಗಳನ್ನು ಒದಗಿಸಲು ಸಾಧ್ಯವಾಗಿಲ್ಲ. ಇಂತಹ ಮೂಲಸೌಕರ್ಯಗಳೇ ಇಲ್ಲದಿದ್ದರೆ ಜನರು ಅಭಿವೃದ್ಧಿಯನ್ನು ಹೇಗೆ ಅನುಭವಿಸಬೇಕು ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಮುಖಂಡ ಎನ್.ಎಸ್. ಬೋಸರಾಜು ಸಚಿವರಾಗಿದ್ದ ಅವಧಿಯನ್ನು ಉಲ್ಲೇಖಿಸಿದ ಅವರು, ಅವರ ಪುತ್ರ ರವಿ ಬೋಸರಾಜು ವಾರ್ಡ್ ವಾಚ್ ಹೆಸರಿನಲ್ಲಿ ಜನರನ್ನು ಭೇಟಿ ಮಾಡುತ್ತಿದ್ದಾರೆ. ಆದರೆ ವಾರ್ಡ್‌ಗಳಲ್ಲಿ ಇರುವ ನೈಜ ಸಮಸ್ಯೆಗಳನ್ನು ಗುರುತಿಸಿ ಅವುಗಳಿಗೆ ಪರಿಹಾರ ಕಲ್ಪಿಸುವ ಕೆಲಸ ಮೊದಲು ನಡೆಯಬೇಕು ಎಂದು ಹೇಳಿದರು.

ವಿಶೇಷವಾಗಿ ವಾರ್ಡ್ ನಂ.22ರಲ್ಲಿ ಮಹಿಳೆಯರು ಬಳಸುವ ಶೌಚಾಲಯಗಳ ಸುತ್ತ ಸಮರ್ಪಕ ತಡೆಗೋಡೆ ಇಲ್ಲದಿರುವುದರಿಂದ ಸುರಕ್ಷತೆಯ ಸಮಸ್ಯೆ ಎದುರಾಗಿದೆ. ಮಹಿಳೆಯರು ಆತಂಕವಿಲ್ಲದೆ ಶೌಚಾಲಯ ಬಳಸುವಂತಹ ವ್ಯವಸ್ಥೆ ಕಲ್ಪಿಸುವುದು ಮಹಾನಗರ ಪಾಲಿಕೆಯ ಜವಾಬ್ದಾರಿಯಾಗಿದೆ ಎಂದು ಒತ್ತಾಯಿಸಿದರು.

ಗುಡ್ಡದ ಮೇಲಿರುವ ಶೌಚಾಲಯಗಳಿಂದ ಮಳೆಗಾಲದಲ್ಲಿ ತ್ಯಾಜ್ಯ ಮಿಶ್ರಿತ ನೀರು ಕೆಳಭಾಗದ ಮನೆಗಳ ಮುಂಭಾಗಕ್ಕೆ ಹರಿದು ಬರುತ್ತಿದೆ. ಸಮರ್ಪಕ ಚರಂಡಿ ವ್ಯವಸ್ಥೆಯೂ ಇಲ್ಲದ ಕಾರಣ ನಿವಾಸಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಅವರು ದೂರಿದರು.

ನಗರವನ್ನು ಬಯಲು ಶೌಚಮುಕ್ತವೆಂದು ಘೋಷಿಸಲಾಗಿದೆ. ಆದರೆ ಕೆಲವು ವಾರ್ಡ್‌ಗಳಲ್ಲಿ ಇನ್ನೂ ಮೂಲಭೂತ ಶೌಚಾಲಯ ಸೌಲಭ್ಯ ಮತ್ತು ಸುರಕ್ಷತೆಯ ಕೊರತೆ ಇದೆ. ನೆಲಮಟ್ಟದ ಸಮಸ್ಯೆಗಳಿಗೆ ಪರಿಹಾರ ನೀಡದೇ ಕೇವಲ ಘೋಷಣೆಗಳಿಂದ ಜನರ ಸಂಕಷ್ಟ ನಿವಾರಣೆಯಾಗುವುದಿಲ್ಲ ಎಂದು ಟೀಕಿಸಿದರು.

ರವಿ ಬೋಸರಾಜು ಅವರಿಗೆ ನಿಜವಾಗಿಯೂ ವಾರ್ಡ್‌ಗಳ ಸಮಸ್ಯೆಗಳ ಬಗ್ಗೆ ಕಾಳಜಿ ಇದ್ದರೆ, ವಾರ್ಡ್ ನಂ.22ಕ್ಕೆ ಭೇಟಿ ನೀಡಿ ಕುಡಿಯುವ ನೀರು, ಚರಂಡಿ ಹಾಗೂ ಶೌಚಾಲಯದ ಪರಿಸ್ಥಿತಿಯನ್ನು ಪರಿಶೀಲಿಸಿ ಪರಿಹಾರಕ್ಕೆ ಮುಂದಾಗಬೇಕು. ಕಾಮಗಾರಿಗಳಲ್ಲಿ ಅಕ್ರಮ ನಡೆಯುತ್ತಿದೆ ಎಂಬ ತಮ್ಮ ಆರೋಪಗಳಿಗೂ ಉತ್ತರ ಸಿಗಬೇಕು ಎಂದು ರಾಮನಗೌಡ ಹೇಳಿದರು.

ವಾರ್ಡ್ ನಂ.22ರಲ್ಲಿ ತಕ್ಷಣ ನಾಲ್ಕು ನೀರಿನ ಟ್ಯಾಂಕ್‌ಗಳನ್ನು ನಿರ್ಮಿಸಬೇಕು, ಪ್ರತಿಯೊಂದು ಮನೆಗೂ ಶೌಚಾಲಯ ಸೌಲಭ್ಯ ಕಲ್ಪಿಸಬೇಕು, ಸಾರ್ವಜನಿಕ ಶೌಚಾಲಯಗಳ ಸುತ್ತ ಸುರಕ್ಷಿತ ತಡೆಗೋಡೆ ನಿರ್ಮಿಸಬೇಕು ಹಾಗೂ ಸಮರ್ಪಕ ಚರಂಡಿ ವ್ಯವಸ್ಥೆ ರೂಪಿಸಬೇಕು ಎಂದು ಅವರು ಆಗ್ರಹಿಸಿದರು.

ಮಹಾನಗರ ಪಾಲಿಕೆಯ ನಿರ್ಲಕ್ಷ್ಯದ ಕುರಿತು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ದೂರು ಸಲ್ಲಿಸಲಾಗುವುದು. ವಾರ್ಡ್ ನಿವಾಸಿಗಳ ಸಮಸ್ಯೆಗಳು ಬಗೆಹರಿಯುವವರೆಗೆ ಜೆಡಿಎಸ್ ಹೋರಾಟ ಮುಂದುವರಿಸಲಿದೆ ಎಂದು ರಾಮನಗೌಡ ಏಗನೂರು ತಿಳಿಸಿದರು.

ಈ ಸಂದರ್ಭದಲ್ಲಿ ವಾರ್ಡ್ ನಿವಾಸಿಗಳು, ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K